ಸಂಪುಟ 01 । ಸಂಚಿಕೆ 86 । ಭಾನುವಾರ 8 ಫೆಬ್ರವರಿ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

MA ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ರಾಷ್ಟ್ರೀಯ ಒಪೇರಾ ದಿನ

ಪ್ರತಿ ವರ್ಷ ಫೆಬ್ರವರಿ 8 ರಂದು ಒಪೇರಾ ದಿನವನ್ನು ಆಚರಿಸಲಾಗುತ್ತದೆ. ಒಪೇರಾ ಎಂದರೆ ನಟನೆ, ದೃಶ್ಯಾವಳಿ, ವೇಷಭೂಷಣಗಳು ಮತ್ತು ನೃತ್ಯದ ಸಂಯೋಜನೆ. ಇಟಾಲಿಯನ್ ಭಾಷೆಯಲ್ಲಿ 'ಒಪೇರಾ' ಎಂಬ ಪದದ ಅರ್ಥ 'ಕೆಲಸ', ಮತ್ತು ಪಠ್ಯವನ್ನು 'ಲಿಬ್ರೆಟ್ಟೊ' ಎಂದು ಕರೆಯಲಾಗುತ್ತದೆ, ಇದರರ್ಥ "ಸಣ್ಣ ಪುಸ್ತಕ".

## ಸುಭಾಷಿತ

ಕಾಲ ಎಲ್ಲವನ್ನೂ ತೋರಿಸುತ್ತದೆ. ಸಹನೆ ಎಲ್ಲವನ್ನೂ ಗೆಲ್ಲಿಸುತ್ತದೆ. ನಂಬಿಕೆ ದಾರಿ ತೋರಿಸುತ್ತದೆ. ಅನುಭವ ಗುರಿ ತಲುಪಿಸುತ್ತದೆ.

ಶ್ರೀ ಸಿದ್ಧೇಶ್ವರ ಸ್ವಾಮೀಜಿ

## ಶ್ರೀ ರೇಣುಕಾಚಾರ್ಯ ಜಯಂತಿ ಸಿದ್ಧತೆ

**ಕೊಪ್ಪಳ: ಜಿಲ್ಲಾಡಳಿತದ ವತಿಯಿಂದ ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಮಾರ್ಚ್ 1 ರಂದು ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚ–'ರಿಸಲು ಸಂಬ0ಧಿಸಿದ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಶ್ರೀ ರೇಣುಕಾಚಾರ್ಯ ಜಯಂತಿ ಆಚರಣೆ ಕು–ರಿತಾದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.**

ಸಮಾಜದ ಮುಖಂಡರ ಆಶಯದಂತೆ ಜಿಲ್ಲಾ ಮಟ್ಟದ ಶ್ರೀ ರೇಣುಕಾಚಾರ್ಯ ಜಯಂತಿ ಆಚರಣೆಯನ್ನು ಅದ್ದೂರಿಯಾಗಿ ಆಚರಿಸಲಾಗುವುದು. ಅಂದು ಬೆಳಿಗ್ಗೆ 8 ಗಂಟೆಗೆ ಶ್ರೀ ರೇಣುಕಾಚಾರ್ಯ ಅವರ ಭಾವಚಿತ್ರದ ಮೆರವಣಿಗೆಯು ನಗರದ ಗವಿಮಠದಿಂದ ಪ್ರಾರಂಭಗೊ0ಡು ಜವಾಹರ ರಸ್ತೆ ಮೂಲಕ ಅಶೋಕ ವೃತ್ತದವರೆಗೆ ಜರುಗಲಿದೆ. ಬಳಿಕ 10.30 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ವೇದಿಕೆ ಸಮಾರಂಭ ನಡೆಯಲಿದ್ದು, ಈ ಕಾರ್ಯಕ್ರಮದಲ್ಲಿ ಪೂಜೆ, ಶ್ರೀ ರೇಣುಕಾಚಾರ್ಯರ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯಕ್ರಮಗಳು ನಡೆಯಲಿದೆ ಎಂದು ಅವರು ತಿಳಿಸಿದರು. ಸಮಾರಂಭ ದಿನದಂದು, ಮೆರವಣಿಗೆ ಮಾರ್ಗದ ಸ್ವಚ್ಛತೆ, ಕಾರ್ಯಕ್ರಮದ ಸ್ಥಳದ ಸ್ವಚ್ಛತೆ, ಮೆರವಣಿಗೆಯಲ್ಲಿ ಹಾಗೂ ವೇದಿಕೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಜನ–ರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ನಗರಸಭೆಯಿಂದ ಒದಗಿಸಬೇಕು. ಜಿಲ್ಲಾ ಮಟ್ಟದ ಜಯಂತಿ ಆಚರಣೆ ಕಾರ್ಯಕ್ರಮಕ್ಕಾಗಿ ಸಂಬ0ಧಿಸಿದ ಎಲ್ಲ ಇಲಾಖೆಗಳ ಅಧಿಕಾ–ರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸಂಬ0ಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಯಂತಿ ಕಾರ್ಯಕ್ರಮ ಯಶಸ್ವಿಗೆ ಸಮಾಜದ ಎಲ್ಲಾ ಮುಖಂಡರು, ಸಾರ್ವಜನಿಕರು ಸಹಕ–ರಿಸಬೇಕು ಎಂದು ಅವರು ಮನವಿ ಮಾಡಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ, ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಎ. ಬಸವರಾಜ, ರೇಣುಕಾಚಾರ್ಯರ ಸಮಾಜದ ಮುಖಂಡರಾದ ಹಂಪಯ್ಯ ಮೆತಗಲ್ಲ, ಬಸವರಾಜ ಗೌರಿಮಠ, ಶಿವಕುಮಾರ್ ಹಿರೇಮಠ, ನೀಲಕಂಠಯ್ಯ ಹಿರೇಮಠ, ನಾಗಭೂಷಣ ಸಾಲಿಮಠ, ಎಸ್.ಎಸ್. ಹಿರೇಮಠ, ಗಿರೀಶ ಹಿರೇಮಠ, ದಯಾನಂದ ಸಿ.ಎಸ್., ನಾಗಬಸಯ್ಯ, ರವಿ ಹಿರೇಮಠ್, ಅರುಣಕುಮಾರ್, ಶರಣಯ್ಯ ಹಿರೇಮಠ, ಸೇರಿದಂತೆ ಮತ್ತಿತರರು ಹಾಗೂ ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



# ತಣ್ಣಗಾದ ಅಧಿಕಾರ ಹಂಚಿಕೆ ಗೊಂದಲ : ಬಜೆಟ್ ತಯಾರಿಯಲ್ಲಿ ಬ್ಯುಸಿಯಾದ ಸಿಎಂ

**ಬೆಂಗಳೂರು: ಅಧಿಕಾರ ಹಂಚಿಕೆಯ ಗೊಂದಲಗಳು ತಣ್ಣ ಗಾಗಿದ್ದು, ಸದ್ಯಕ್ಕೆ ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಳ್ಳುವು ದಿಲ್ಲ ಎಂಬುದು ಸ್ಪಷ್ಟವಾಗುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರುಮಳವಾಗಿ ಬಜೆಟ್ ತಯಾರಿಕೆಯಲ್ಲಿ ತೊಡಗಿದ್ದಾರೆ.**

ನಿನ್ನೆ 10 ಇಲಾಖೆಗಳ ಸಚಿವರು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದರು. ಇಂದು ಪರಿಶಿಷ್ಟ ವರ್ಗಗಳ ಕಲ್ಯಾಣ, ಯುವ ಸಬಲೀಕರಣ–ಕ್ರೀಡೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಇ–ಆಡಳಿತ, ವೈದ್ಯಕೀಯ ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ಜೀವನೋಪಾಯ, ಮೂಲಸೌಕರ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ




ಮುಖ್ಯಸ್ಥರ ಜೊತೆ ಸಮಾಲೋಚನೆ ನಡೆಸಿದ್ದಾರೆ. ಮುಖ್ಯಮಂತ್ರಿ ಭಾಷಣಗಳ ಸಂಗ್ರಹ ಛಾಯಾಗ್ರಹಣ ಉಪಕರಣಗಳು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಅವರು ಸಭೆಯಲ್ಲಿ ಭಾಗವಹಿಸಿದ್ದರು. ಉಳಿದಂತೆ ಎಲ್ಲಾ ಇಲಾಖೆಗಳ ಜವಾಬ್ದಾರಿಯೂ ಮುಖ್ಯಮಂತ್ರಿಯವರ ಬಳಿಯಲ್ಲೇ ಇವೆ.

ಹಾಗಾಗಿ ಸಚಿವರ ಬದಲಾಗಿ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳ ಜೊತೆ ಚರ್ಚೆ ನಡೆಸಲಾಗಿದೆ. ವಿಧಾನಮಂಡಲ ಅಧಿವೇಶನದ ಬಳಿಕ ನಾಯಕತ್ವ ಬದಲಾವಣೆಗೆ ಹೈಕಮಾಂಡ್ ನಾಯಕರು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಇಬ್ಬರನ್ನೂ ದೆಹಲಿಗೆ ಕರೆಸುತ್ತಾರೆ ಎಂದು ಹೇಳಲಾಗಿತ್ತು. ಆದರೆ ಅಂತಹ ಯಾವ ಲಕ್ಷಣಗಳೂ ಸದ್ಯಕ್ಕೆ ಕಂಡು ಬರುತ್ತಿಲ್ಲ.

ಡಿ.ಕೆ.ಶಿವಕುಮಾರ್ ಬೆಂಬಲಿಗರು ಕೆಲವೆಡೆ ಬಹಿರಂಗ ಹೇಳಿಕೆಗಳನ್ನು ನೀಡಿ ನಾಯಕತ್ವ ಬದಲಾವಣೆಯ ಗೊಂದಲವನ್ನು ಹೈಕಮಾಂಡ್ ಮಧ್ಯ ಪ್ರವೇಶಿಸಿ ಕೂಡಲೇ ಬಗೆಹರಿಸಬೇಕು ಎಂದು ಒತ್ತಾಯಿಸಿದ್ದಾರೆ. ಸಿದ್ದರಾಮಯ್ಯ ಬಣದ ಸಚಿವ ಸತೀಶ್ ಜಾರಕಿಹೊಳಿ ಕೂಡ ಇದಕ್ಕೆ ಧ್ವನಿಗೂಡಿಸಿದ್ದಾರೆ. ನಾಯಕತ್ವದ

# ಫೆ. 24 ಕೊಪ್ಪಳ ಭಾಗ್ಯನಗರ ಬಂದ್



❑ ನೈಜ್ಯ ದೆಸೆ ನ್ಯೂಸ್

**ಕಾರ್ಖಾನೆಗಳ ವಿಸ್ತರಣೆ ಮತ್ತು ಹೊಸ ಸ್ಥಾಪನೆ ವಿರೋಧಿಸಿ ನಡೆದ ಸುಧೀರ್ಘ ಹೋರಾಟ ಅದರ ಭಾಗವಾಗಿ 2025ರ ಫೆ. 24 ರಂದು ಗವಿಸಿದ್ಧೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಬಂದ್ ಮಾಡಿ ಹೋರಾಟ ಮಾಡಲಾದ ನೆನಪು ಹಾಗೂ ಹೋರಾಟ ತೀವ್ರಗೊಳಿಸುವ ನಿಟ್ಟಿನಲ್ಲಿ ಮತ್ತೊಮ್ಮೆ ಬೃಹತ್ ಹೋರಾಟ ಹಾಗೂ ಬಂದ್ ಕರೆ ಕೊಡಲಾಗಿದೆ.**

ಗವಿಮಠದಿಂದ ತಾಲೂಕ ಕ್ರೀಡಾಂಗಣದ ವರೆಗೆ ಪ್ರತಿಭಟನಾ ಮೆರವಣಿಗೆ ಇರಲಿದೆ ಸುಮಾರು ಹತ್ತು ಸಾವಿರಕ್ಕೂ ಅಧಿಕ ಜನರು, ವಿದ್ಯಾರ್ಥಿಗಳು, ಮಹಿಳೆಯರು ಸೇರಿಸುವ ಗುರಿ ಇಡಲಾಗಿದೆ. ಬಲ್ಡೋಟ ಕಣ್ಣೊರೆಸುವ ಸಿ ಎಸ್ ಆರ್ ಫಂಡ್ ಸಹಾಯದ ಟ್ರೀ ಗಾರ್ಡ ಮತ್ತು ಸಿಮಂಟ್ ಆಸನಗಳ ಮರಳಿಸುವ ಅಭಿಯಾನಕ್ಕೆ ಚಾಲನೆ. 20 ಗ್ರಾಮಗಳ ಆರೋಗ್ಯ ಸಮೀಕ್ಷೆ, ಪರಿಸರ ಮತ್ತು ಆರೋಗ್ಯ ಪುನರ್ ನಿರ್ಮಾಣ–ಕ್ಕೆ ಒತ್ತಾಯ. ತಜ್ಞರ ವರದಿಯಂತೆ ಕಾರ್ಖಾನೆಗಳ ಸ್ಥಳಾಂತರ ಆರಂಭಿಸಬೇಕು.


ತುಂಗಭದ್ರಾ ವಿಷಗೊಳಿಸುವ ಕಾರ್ಖಾನೆಗಳನ್ನು ಮುಚ್ಚಿಸಬೇಕು, ಅಲ್ಲಿಯವರೆಗೆ ಶುದ್ದ ಸಂಸ್ಕರಿಸಿದ ನೀರನ್ನು ಜನ ಜಾನುವಾರುಗಳಿಗೆ ಸರಬುರಾಜು ಮಾಡಲು ಕ್ರಮ ತೆಗೆದುಕೊಳ್ಳಬೇಕು. ಬಸಾಪುರ ಸಾರ್ವಜನಿಕ ಕೆರೆಯನ್ನು ಕೂಡಲೇ ಮರಳಿ ಜನರಿಗೆ ಬಿಟ್ಟು ಕೊಡಬೇಕು. ಭದ್ರಶ್ರೀ ಕಾರ್ಖಾನೆ ವಿಸ್ತರಣೆಗೆ ವಿರೋಧಿಸಿ ಹೋರಾಟ ತೀವ್ರಗೊಳಿಸುವದು. ಈ ಬೇಡಿಕೆ ಸೇರಿ ಇತರೆ ನಿರ್ಣಯಗಳನ್ನು ತೆಗೆದುಕೊಂಡಿದ್ದು,ಹೋರಾಟ ವೇದಿಕೆ ಸಂಚಾಲಕ ಕೆ. ಬಿ. ಗೋನಾಳ ಅವರು ಮಂಡಿಸಿದರು ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಅವರು ಅನುಮೋದಿಸಿ ಮಾತನಾಡಿದರು.

# ಜನರ ಅಭಿವೃದ್ಧಿಗಾಗಿಯೇ ಗ್ಯಾರಂಟಿ ಯೋಜನೆಗಳು ಜಾರಿ: ಎಚ್.ಎಂ.ರೇವಣ್ಣ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಫೆಬ್ರವರಿ 07 (ಕರ್ನಾಟಕ ವಾರ್ತೆ): ರಾಜ್ಯದ ಜನರ ಅಭಿವೃದ್ಧಿಯನ್ನೇ ಮುಖ್ಯ ಗುರಿಯಾಗಿಸಿಕೊಂಡು ರಾಜ್ಯ ಸರ್ಕಾರವು ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆ. ಈ ಬಗ್ಗೆ ಜಾಗೃತಿ ಮೂಡಿಸಲು ರಾಜ್ಯದ ರಾಜ್ಯದ 31 ಜಿಲ್ಲೆಗಳ ಪೈಕಿ ಈಗಾಗಲೇ 21 ಜಿಲ್ಲೆಗಳಲ್ಲಿ ಗ್ಯಾರಂಟಿ ಯೋಜನೆಗಳ ಮಾಹಿತಿಯ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯಾಧ್ಯಕ್ಷರಾದ ಎಚ್.ಎಂ.ರೇವಣ್ಣ ಹೇಳಿದರು.**

ಫೆ.07ರ ಶನಿವಾರ ದಂದು ನಗರದ ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಸಿಲ್ವರ್ ಜುಬ್ಲಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಮಾಜಿ ಪ್ರಧಾನಿ ಇಂದಿರಾಗಾಂಧಿಯವರ 20 ಅಂಶಗಳ ಕಾರ್ಯಕ್ರಮವು ದೇಶದ ಬಡವರ ಜೀವನದಲ್ಲಿ ಸಾಕಷ್ಟು ಬದಲಾವಣೆ ತಂದಿತು. ದೇವರಾಜ ಅರಸು



ಅವರ ಉಳುವವನೇ ಭೂಮಿಯ ಒಡೆಯ ಎನ್ನುವ ಕಾಯ್ದೆ ಜಾರಿಯಿಂದಲೂ ಕ್ರಾಂತಿ ನಡೆಯಿತು. ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಹಿಂದಿನ ಅವಧಿಯಲ್ಲಿ 150ಕ್ಕೂ ಹೆಚ್ಚು ಭರವಸೆ ನೀಡಿ ಅವುಗಳನ್ನು ಸಾಕಾರಗೊಳಿಸಿದ ಮಹತ್ವದ ಎಲ್ಲ ಕಾರ್ಯಗಳನ್ನು ರಾಜ್ಯ ಸರ್ಕಾರವು ಈಗ ವಿವಿಧ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಮಾಡುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಶಕ್ತಿಯೋಜನೆಯಡಿ 634 ಕೋಟಿ ಉಚಿತ ಪ್ರಯಾಣವು ದಾಖಲೆಯಾಗಿದೆ. ಇದಕ್ಕಾಗಿ ರಾಜ್ಯ ಸರ್ಕಾರವು 16,369 ಕೋಟಿ ರೂ. ಗಳನ್ನು ಅನುದಾನ ನೀಡಿದೆ. ಶಕ್ತಿ ಯೋಜನೆಗೆ ವಾರ್ಷಿಕ 52 ಕೋಟಿ ರೂ. ವ್ಯಯವಾಗುತ್ತಿದೆ. ಮನೆಯ ಯಜಮಾನಿಗೆ ಪ್ರತಿ ತಿಂಗಳು 2000 ರೂ. ನೀಡುವ ಗೃಹಲಕ್ಷ್ಮಿ ಯೋಜನೆಯಡಿ ರಾಜ್ಯದಲ್ಲಿ 1.24 ಕೋಟಿ ಫಲಾನುಭವಿಗಳು ಈ ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಈ ಯೋಜನೆಗೆ ಸರ್ಕಾರವು ಈವರೆಗೆ 57,464 ಕೋಟಿ ರೂ. ಗಳನ್ನು ವ್ಯಯಿಸಿದೆ. ಯುವನಿಧಿ ಯೋಜನೆಯಡಿ ರಾಜ್ಯದಲ್ಲಿನ 2,98 ಲಕ್ಷ ಫಲಾನುಭವಿಗಳಿಗೆ ಇದುವರೆಗೆ 874 ಕೋಟಿ ರೂ. ವ್ಯಯ ಮಾಡಿದೆ.

ಅನ್ನಭಾಗ್ಯ ಯೋಜನೆಯಡಿ ರಾಜ್ಯದಲ್ಲಿನ 4.08 ಕೋಟಿ ಫಲಾನುಭವಿಗಳಿಗೆ ಇದುವರೆಗೆ 16,574 ಕೋಟಿ ರೂ ವ್ಯಯವಾಗಿದೆ. ಗೃಹಜ್ಯೋತಿ ಯೋಜನೆಯಡಿ ರಾಜ್ಯದಲ್ಲಿನ 1.65 ಕೋಟಿ ಫಲಾನುಭವಿಗಳಿಗೆ ಇದುವರೆಗೆ 21,239 ಕೋಟಿ ರೂ. ವ್ಯಯ ಮಾಡಿದ್ದೇವೆ ಎಂದು ಅವರು ಗ್ಯಾರಂಟಿ ಯೋಜನೆಗಳ ಸಾಧನೆಯ ಬಗ್ಗೆ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಮೈಸೂರು ವಿಭಾಗದ ಉಪಾಧ್ಯಕ್ಷರಾದ ಡಾ.ಪುಷ್ಪಾ ಅಮರನಾಥ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರಾದ ಹನುಮಂತಪ್ಪ ಜಾಲಿಬೆಂಚಿ ಅವರು ಇದ್ದರು.

# ಮಹಿಳೆಯರ ಸಮಸ್ಯೆಗಳಿಗೆ ಸ್ಪಂದಿಸಲು ಮಹಿಳಾ ಆಯೋಗ ಸದಾ ಸಿದ್ದ

❑ ನೈಜ್ಯ ದೆಸೆ ನ್ಯೂಸ್

**ಮಹಿಳೆಯರಿಗೆ ಸಂಬಂಧಿಸಿದ ಯಾವುದೇ ಸಮಸ್ಯೆಗಳನ್ನು ಪರಿಹರಿಸಲು ರಾಜ್ಯ ಮಹಿಳಾ ಆಯೋಗವು ಸದಾ ಸಿದ್ದವಾಗಿದ್ದು, ಮಹಿಳೆಯರ ರಕ್ಷಣೆಗೆ ಹಾಗೂ ಮಹಿಳೆಯರಿಗೆ ಕಾನೂನಾತ್ಮಕ ನೆರವು ನೀಡಲು ಬದ್ಧವಾಗಿರುತ್ತದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಹೇಳಿದರು.**

ಕೊಪ್ಪಳ ಜಿಲ್ಲೆಯಲ್ಲಿ ಕಳೆದ ಮೂರು ದಿನಗಳಿಂದ ಹಮ್ಮಿಕೊಂಡಿದ್ದ ಪ್ರವಾಸ ಕಾರ್ಯಕ್ರಮದಲ್ಲಿ ಗಮನಿಸಿದ ಅಂಶಗಳು, ಸಮಸ್ಯೆಗಳ ಕುರಿತು ಕೈಗೊಂಡ ಕ್ರಮಗಳ ಕುರಿತು ಮಾಹಿತಿ ನೀಡಲು ನಗರದ ಪ್ರವಾಸಿ ಮಂದಿರದಲ್ಲಿ ಶನಿವಾರದಂದು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮದವರನ್ನು ಉದ್ದೇಶಿಸಿ ಅವರು ಮಾತನಾಡಿದರು. ಜಿಲ್ಲೆಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ 10ಕ್ಕಿಂತ ಹೆಚ್ಚು ಉದ್ಯೋಗಿಗಳು ಕಾರ್ಯನಿರ್ವಹಿಸುವ



ಸ್ಥಳಗಳಲ್ಲಿ ಕಡ್ಡಾಯವಾಗಿ ಆಂತರಿಕ ದೂರು ನಿವಾರಣಾ ಸಮಿತಿ ರಚಿಸಬೇಕು ಎಂದು ಸೂಚಿಸಲಾಗಿದೆ. ಕೆಲಸದ ಸ್ಥಳದಲ್ಲಿ ಮಹಿಳೆಯರಿಗೆ ಸುರಕ್ಷಿತ ವಾತಾವರಣ ನಿರ್ಮಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಮದ್ಯ ಹಾಗೂ ಮಾದಕ ವಸ್ತುಗಳ ಮಾರಾಟ ಮತ್ತು ಬಳಕೆಗೆ ಕಡಿವಾಣ ಹಾಕಲು ಅಬಕಾರಿ ಇಲಾಖೆಗೆ ಸೂಚಿಸಲಾಗಿದೆ ಎಂದರು.

ನಗರದ ಸಿದ್ದೇಶ್ವರ ನಗರದಲ್ಲಿನ ಅಲೆಮಾರಿ ಜನಾಂಗವನ್ನು ಭೇಟಿ ಮಾಡಲಾಗಿದ್ದು, ಅವ–ರಿಗೆ ನಗರಸಭೆಯಿಂದ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ. ಅಲ್ಲಿನ ವಿದ್ಯುತ್ ಕಂಬ ದುರಸ್ತಿಗೊಳಿಸಲಾಗಿದೆ. ಆದರೆ ಅಂಗನವಾಡಿ ಪಕ್ಕದಲ್ಲೇ ರೈಲು ಹಳಿ ಇರುವುದರಿಂದ ಮಕ್ಕಳ ಸುರಕ್ಷತೆ ಪ್ರಶ್ನೆಯಾಗಿದ್ದು, ಸುಮಾರು 3 ಕಿ.ಮೀ ವ್ಯಾಪ್ತಿಯಲ್ಲಿ ಸುರಕ್ಷತಾ ಫೆನ್ಸಿಂಗ್ ಅಳವಡಿಸಲು ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. ಜಿಲ್ಲೆಯ ಎಲ್ಲಾ ವಿದ್ಯಾರ್ಥಿ ವಸತಿ ನಿಲಯಗಳಲ್ಲಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆ ಕಡ್ಡಾಯವಾಗಿ ನಡೆಸಬೇಕು. ಗುಣಮಟ್ಟದ ಆಹಾರ ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು. ಸರ್ಕಾರಿ ಯೋಜನೆಗಳ ಬಗ್ಗೆ ಜನರಲ್ಲಿ ಇನ್ನಷ್ಟು ಜಾಗೃತಿ ಮೂಡಿಸುವುದು ಅಗತ್ಯ. ಪ್ರತಿ ಹಳ್ಳಿಯಲ್ಲಿ ಮಹಿಳಾ ಗ್ರಾಮಸಭೆ ಕಡ್ಡಾಯವಾಗಿ ನಡೆಸಿ ಮಹಿಳೆಯರ ಸಮಸ್ಯೆಗಳನ್ನು ಪರಿಹ–ರಿಸಬೇಕು ಎಂದು ಸಂಬಂಧಿತ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯ ತಾಯಿ ಮತ್ತು ಮಗುವಿನ ಆಸ್ಪತ್ರೆಯಲ್ಲಿ ಉತ್ತಮ ಸೌಲಭ್ಯಗಳು ಒದಗಿಸಿರುವುದು ಪ್ರಶಂಸನೀಯ. ಕಾರಟಗಿ ತಾಲ್ಲೂಕಿನ ಮೊರಾರ್ಜಿ ದೇಸಾಯಿ ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ಭೇಟಿ ನೀಡಿ ಉತ್ತಮ ವ್ಯವಸ್ಥೆ ಗಮನಿಸಲಾಗಿದೆ. ಇದೇ ರೀತಿಯ ಸೌಲಭ್ಯಗಳನ್ನು ಜಿಲ್ಲೆಯ ಎಲ್ಲಾ ವಸತಿ ನಿಲಯಗಳಲ್ಲಿ ಒದಗಿಸಬೇಕು ಎಂದು ತಿಳಿಸಿದರು. ನರೇಗಾ ಯೋಜನೆಯಡಿ ಶೇ.50 ರಷ್ಟು ಜಾಬ್‌ಕಾರ್ಡ್‌ಗಳನ್ನು ಮಹಿಳೆಯರಿಗೆ ನೀಡಬೇಕು ಹಾಗೂ ಹೆಚ್ಚಿನ ಉದ್ಯೋಗದಿನಗಳನ್ನು ಒದಗಿಸಬೇಕು ಎಂದು ಇಲಾಖಾ ಅಧಿಕಾ–ರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಡಿವೈಎಸ್‌ಪಿ ಮುತ್ತಣ್ಣ ಸವರಗೋಳ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ ಸೇರಿದಂತೆ ಅಧಿಕಾರಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಅಂತರ್ಗಾಮಿನಿ..

ಕವಿತೆ ನಾನು...
ನನ್ನೊಳಗಿನ ಪದ
ಪದಗಳಲೂ ಅವಿತ
ಭಾವದೊರತೆ ನೀನು.!

ಪ್ರತಿ ಸಾಲಿನಲೂ
ನೀನೇ ಸ್ವರವು
ಸ್ವರ ಸ್ವರದಲೂ
ನಿನ್ನದೇ ಹರಿವು.!

ಪ್ರತಿ ಶಬ್ದಗಳಿಗೂ
ನೀನೇ ಸಾರವು
ಸಾರ ಸ್ವಾರಗಳಲೂ
ನಿನ್ನದೇ ಅರಿವು.!

ಅಕ್ಷರ ಅಕ್ಷರದಲೂ
ನೀನೇ ಛಂದಸ್ಸು
ಲಯ ಲಾಲಿತ್ಯದಲು
ನಿನ್ನದೇ ತೇಜಸ್ಸು.!

ಆದಿ ಅಂತ್ಯದಲೂ
ನಿನ್ನ ಪ್ರೇಮಪ್ರಾಸ
ಪ್ರತಿಮೆ ಉಪಮಾನದಿ
ನಿನ್ನದೇ ನಗೆಹಾಸ.!

ನಿನ್ನೊಲವೇ ಪಲ್ಲವಿ
ನೆನಪುಗಳೇ ಚರಣ
ಕನಸುಗಳ ತೋರಣ
ನಿನ್ನದೇ ಅನುರಣನ.!

ಅನುರಾಗ ತರಂಗಿಣಿ
ಅನುಭಾವ ಸಂಚಾಲಿನಿ
ಅನುಕ್ಷಣ ಅಂತರಂಗ
ಪುಳಕಿಸುವ ಗುಪ್ತಗಾಮಿನಿ.!ತುಳಸಿದಾಸ ಬಿ ಎಸ್

ಎ.ಎನ್.ರಮೇಶ್. ಗುಬ್ಬಿ

# ವಿದ್ಯಾರ್ಥಿಗಳು ಶಿಸ್ತು ಬದ್ಧ ವಾಗಿ ಅಧ್ಯಯನ ಮಾಡಬೇಕು :ಡಾ.ಹೈಂದವಿ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಸ್ವಾಮಿ ವಿವೇಕಾನಂದರ ವಾಣಿಯಂತೆ ಹೇಳಿ ಎದ್ದೇಳಿ ನಿಮ್ಮ ಗುರಿ ಮುಟ್ಟುವವರೆಗೆ ನಿಲ್ಲಬೇಡಿ ಅನ್ನುವಂತೆ ವಿದ್ಯಾರ್ಥಿಗಳು ಶಿಸ್ತುಬದ್ಧವಾಗಿ ಅಧ್ಯಯನ ಮಾಡುವುದರ ಜೊತೆ ನಿಮ್ಮ ಗುರಿ ಉತ್ತಮ ಫಲಿತಾಂಶ ಹಾಗೂ ಉತ್ತಮ ಜೀವನ ನಿರ್ಮಿಸಿ ಕೊಳ್ಳುವುದರ ಜೊತೆಗೆ ನಮ್ಮ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿ ಎಂದು ತಿಳಿಸಿದರು.**

ಪಟ್ಟಣದ ಶಾರದಾ ವಿದ್ಯಾನಿಕೇತನ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಥ–'ಮ ವರ್ಷದ ವಿದ್ಯಾರ್ಥಿಗಳಿಂದ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭದಲ್ಲಿ ಶಾರದಾ ಶಿಕ್ಷಣ ಸಂಸ್ಥೆ(ರಿ)ಯ ಕಾರ್ಯದರ್ಶಿಯಾದ ಕು.ಡಾ. ಹೈಂದವಿ ಮಧುಸೂದನ್ ಗುಪ್ತಾಜೀ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಈ ಕಾರ್ಯಕ್ರಮದಲ್ಲಿ




ಮುಖ್ಯ ಅತಿಥಿಯಾಗಿ ಸರ್ಕಾರಿ ಪ್ರೌಢ ಶಾಲೆ ಮಲ್ಲದಗುಡ್ಡದ ಮುಖ್ಯೋಪಾಧ್ಯಾಯರಾದ ಶರಣಬಸಪ್ಪರವರು ಮಾತನಾಡಿ ಮಕ್ಕಳಿಗೆ ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕಗಳನ್ನು ಹೇಗೆ ಪಡೆಯಬೇಕೆನ್ನುವುದರ ಬಗ್ಗೆ ತಿಳಿಸಿ ತಂದೆ ತಾಯಿಗಳಿಗೆ ಹಾಗೂ ಸಮಾಜಕ್ಕೆ ಉತ್ತಮ ಮಕ್ಕಳಾಗಿ ಬೆಳೆಯಿರಿ ಎಂದು ತಿಳಿಸಿದರು.

ಇನ್ನೋರ್ವ ಅತಿಥಿಗಳಾದ ಡಾ. ಪರಮೇಶ್ವರಪ್ಪ ಗೋಪಶೆಟ್ಟಿ ರವರು ವಿದ್ಯಾರ್ಥಿಗಳು ಅಂಕಗಳನ್ನು ಗಳಿಸುವುದರ ಜೊತೆ ಮುಂದಿನ ದಿನಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೂ ಕೂಡ ಹೆಚ್ಚು ಹೊತ್ತು ಕೊಟ್ಟು ಓದುವುದರ ಜೊತೆಗೆ ಕಾಲೇಜಿನ ಜೊತೆಗೆ ಭಾವನಾತ್ಮಕ ಸಂಬಂಧವನ್ನು ಬೆಳೆಸಿಕೊಳ್ಳಿ ಎಂದು ತಿಳಿಸಿದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯರಾದ ವೀರಭದ್ರಯ್ಯ ಸ್ವಾಮಿ ಹಿರೇಮಠ ರವರು ವಹಿಸಿಕೊಂಡು.ಬಿ. ಮಧುಸೂದನ್ ಗುಪ್ತ–ಜಿಯವರ ಬೆಳೆಸಿದ ಈ ಸಂಸ್ಥೆಗೆ ನಿಮ್ಮ ಫಲಿತಾಂಶವೇ ಕಾಲೇಜಿನ ಪ್ರತಿಫಲ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಮುಖ್ಯಸ್ಥರಾದ ಬಿ.ಕಿಶೋರ್ ಕುಮಾರ್ ಹಾಗೂ ಸಂಸ್ಥೆಯ ಅಧ್ಯಕ್ಷರಾದ ಬಿ ಉಮಾ ಮಹೇಶ್ವರಿ ಮಧುಸೂದನ್ ಗುಪ್ತಾಜಿ ಬಿ. ಮಂಜುಳಾ ಕಿಶೋರ್ ಕುಮಾರ್ ಹಾಗೂ ಉಪನ್ಯಾಸಕರಾದ ಬಂದೇನವಾಜ್ ಕಾರ್ಯಕ್ರಮದ ಪ್ರಸ್ತಾವಿಕ ನುಡಿಗಳನ್ನು ನುಡಿದರು. ಸುರೇಂದ್ರರವರು ಕಾರ್ಯಕ್ರಮದ ಕುರಿತು ಮಾತನಾಡಿದರು ಕಾರ್ಯಕ್ರಮವನ್ನು ಪ್ರಿಯಾಂಕ ನಿರೂಪಿಸಿದರು. ಅಶ್ವಿನಿ ಸ್ವಾಗತಿಸಿದರು.ಹುಲಿಗೆಮ್ಮ ವಂದಿಸಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜೀವನದಲ್ಲಿ ಶಿಸ್ತುನ್ನು ರೂಡಿಸಿಕೊಂಡಲ್ಲಿ ಯಶಸ್ಸನ್ನು ಪಡೆಯುವುದಕ್ಕೆ ಸಾಧ್ಯ: ಕಲ್ಮಠ ಶ್ರೀ




❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಶ್ರೀ ಪಂಪಾ ವಿರೂಪಾಕ್ಷೇಶ್ವರ ಪದವಿ ಪೂರ್ವ ಕಾಲೇಜಿನ 2025–26 ನೇ ಸಾಲಿನ ಬೀಳ್ಕೊಡುಗೆ ಹಾಗೂ ಪ್ರತಿಭಾಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಕಲ್ಮಠ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿ ವಿದ್ಯಾರ್ಥಿಗಳಿಗೆ ಆಸಕ್ತಿ ಮತ್ತು ಪರಿಶ್ರಮ ವಿದ್ಯಾಭ್ಯಾಸಕ್ಕೆ ಪೂರಕವಾಗಿವೆ ಜೀವನದಲ್ಲಿ ಶಿಸ್ತನ್ನು ರೂಡಿಸಿಕೊಳ್ಳುವ ಮೂಲಕ ಜೀವನದಲ್ಲಿ ಯಶಸ್ಸು ಪಡೆಯುವುದಕ್ಕೆ ಸಾಧ್ಯ ಎಂದು ತಿಳಿಸಿದರು.**

ಶಿಕ್ಷಣ ಮಹರ್ಷಿ ಲಿಂ. ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳ ಪುಣ್ಯ ಸ್ಮರಣೆ ಅಂಗವಾಗಿ ಶಾಲೆಯ ಆವರಣದಲ್ಲಿ ನಡೆದ ಎಸ್.ಎಸ್.ಎಲ್.ಸಿ. ಪರೀಕ್ಷಾ ಪೂರ್ವ ತಯಾರಿ ಕ್ರ?ಯಾಕಿಂ–ಗ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಾದ ನೀರಮಾನ್ವಿಯ ಆದರ್ಶ ವಿದ್ಯಾಲಯದ ಶಶಾಂಕ್, ಕನ್ಯಾ ಪ್ರೌಢಶಾಲೆಯ ವಿದ್ಯಾರ್ಥಿನಿ ಆಯಿಷಾ ಬೇಗಂ ರವರಿಗೆ ತಲಾ 15ಸಾವಿರ ಪ್ರತಿಭಾ ಪುರಸ್ಕಾರ ಹಾಗೂ ದ್ವಿತೀಯ ಸ್ಥಾನ ಪಡೆದ ಎಂ.ಡಿ.ಆರ್.ಎಸ್. ರಾಜಲಬಂಡ ವಸತಿ ಶಾಲೆಯ ವಿದ್ಯಾರ್ಥಿನಿ ಸ್ಫೂರ್ತಿ ಹಾಗೂ ಕಲ್ಮಠ ಪ್ರೌಢಶಾಲೆಯ ದಿಲೀಪ್ ದಾಸ್ ರವರಿಗೆ ತಲಾ ಹತ್ತು ಸಾವಿರ ಪ್ರತಿಭಾ ಪುರಸ್ಕಾರ ಚೆಕ್ ಅನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಸಂಗಯ್ಯ ಸ್ವಾಮಿ, ಕಾಲೇಜಿನ ಪ್ರಾಚಾರ್ಯ ಎಸ್. ಎಸ್ ಪಾಟೀಲ್, ಪೋತ್ನಾಳ ಸರಕಾರಿ ಪ್ರೌಢಶಾಲೆಯ ಮುಖ್ಯಗುರು ವಲಿಬಾಬು, ಗೋರ್ಕಲ್ ಸರ್ಕಾರಿ ಪ್ರೌಢಶಾಲೆ ಮುಖ್ಯಗುರು ಕಮಲಾ ನಾಯ್ಕ್, ಕಲ್ಮಠ ಪ್ರೌಢಶಾಲೆಯ ಮುಖ್ಯಸ್ಥರಾದ ಪ್ರಭುಸ್ವಾಮಿ, ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಮಂಜುನಾಥ ಕಮತರ್, ಪದವಿ ಕಾಲೇಜು ಪ್ರಾಚಾರ್ಯರಾದ ಸಿದ್ದನಗೌಡ ಉಪನ್ಯಾಸಕ ಅಯ್ಯಪ್ಪ ಅಕ್ಕಸಾಲಿ, ಆನಂದ್ ಕುಮಾರ್, ಹನುಮಂತ, ಮಾರ್ಟಿನ್ ಸೇರಿದಂತೆ ಶಾಲೆಯ ಉಪನ್ಯಾಸಕರು. ವಿದ್ಯಾರ್ಥಿಗಳು ಇದ್ದರು.

## ಪಾರದರ್ಶಕ ಚುನಾವಣೆಗೆ ಸಿದ್ಧತೆ: ಜಿಲ್ಲಾಧಿಕಾರಿ ಸಂಗಪ್ಪ

❑ ನೈಜ್ಯ ದೆಸೆ ನ್ಯೂಸ್

ಮುಂಬರುವ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಹಿನ್ನಲೆಯಲ್ಲಿ ಬಾಗಲಕೋಟೆ ತಹಶೀಲ್ದಾರ್ ಕಚೇರಿಯ ಚುನಾವಣಾ ವಿಭಾಗಕ್ಕೆ ಶುಕ್ರವಾರ ಜಿಲ್ಲಾಧಿಕಾರಿ ಸಂಗಪ್ಪ ಭೇಟಿ ನೀಡಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಪರಿಶೀಲಿಸಿದರು.ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಅವಧಿಯಲ್ಲಿ ಸ್ವೀಕೃತಿಯಾಗಿರುವ ನಮೂನೆ 6, 7 ಮತ್ತು 8ಕ್ಕೆ ಸಂಬಂಧಿಸಿದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ನಿಗದಿತ ಅವಧಿಯಲ್ಲಿ ವಿಲೇವಾರಿಗೊಳಿಬೇಕು. ಅಂತಿಮ ಮತದಾರರ ಪಟ್ಟಿಯನ್ನು ತಯಾರಿಸಬೇಕು ಎಂದು ಅಧಿಕಾರಿಗಳಿಗೆ ಅವರು ಸೂಚಿಸಿದರು.ಉಪಚುನಾವಣೆಯನ್ನು ಶಾಂತಿಯುತವಾಗಿ ಯಶಸ್ವಿಯಾಗಿ ಜರುಗಿಸುವ ನಿಟ್ಟಿನಲ್ಲಿ ಅಗತ್ಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಯಾವುದೇ ರೀತಿಯ ಗೊಂದಲಗಳಿಗೆ ಅವಕಾಶ ನೀಡಬಾರದು. ಅರ್ಜಿಗಳಿಗೆ ಸಂಬಂಧಿಸಿದ ದಾಖಲೆಗಳನ್ನೂ ನೋಡಬೇಕು ಎಂದು ತಹಶೀಲ್ದಾರ್ ವಾಸುದೇವ ಸ್ವಾಮಿ ಅವರಿಗೆ ತಿಳಿಸಿದರು.ಮತದಾರರ ಪಟ್ಟಿಯು ಸಂಪೂರ್ಣವಾಗಿ ಪಾರದರ್ಶಕವಾಗಿದ್ದು, ಯಾವುದೇ ಅರ್ಹ ಮತದಾರ ಮತದಾನದಿಂದ ವಂಚಿತರಾಗಬಾರದು. ಈ ಬಗ್ಗೆ ನಿರ್ಲಕ್ಷ ವಹಿಸದೇ ಜವಾಬ್ದಾರಿಯಿಂದ ಕೆಲಸ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕಾಲ, ಕಾಲಕ್ಕೆ ನೀಡುವ ನಿರ್ದೇಶನಗಳನ್ನು ಪಾಲಿಸಬೇಕು ಎಂದು ತಹಶೀಲ್ದಾರ್ ಮತ್ತು ಚುನಾವಣಾ ವಿಭಾಗದ ಸಿಬ್ಬಂದಿಗೆ ಸೂಚಿಸಿದರು.ನಂತರ ಕಚೇರಿಯ ಸಿಬ್ಬಂದಿ ಶಾಖೆಗೆ ಭೇಟಿ ನೀಡಿದ ಅವರು, ವಿವಿಧ ಶಾಖೆಗಳ ಕಡತಗಳನ್ನು ಪರಿಶೀಲಿಸಿ ಬಾಕಿ ಉಳಿದ ಕಡತಗಳನ್ನು ತ್ವರಿತವಾಗಿ ವಿಲೇವಾರಿ ಮಾಡಬೇಕು ಎಂದು ತಿಳಿಸಿದರು. ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ, ಅವರ ಕುಂದುಕೊರತೆಗಳನ್ನು ಆಲಿಸಬೇಕು. ಎಂದು ಹೇಳಿದರು.ಜನರ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹ–ರಿಸುವ ಕೆಲಸ ಆಗಬೇಕು. ಕಚೇರಿಯಲ್ಲಿ ಸಾರ್ವಜನಿಕರಿಗೆ ಕುಳಿತುಕೊಳ್ಳಲು ಆಸನ ವ್ಯವಸ್ಥೆ ಮತ್ತು ಕಚೇರಿಯ ಒಳಾಂಗಣ ಹಾಗೂ ಹೊರಾಂಗಣದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.ಹೆಚ್ಚುವರಿ ಜಿಲ್ಲಾಧಿಕಾರಿ ಅಶೋಕ ತೇಲಿ, ತಹಶೀಲ್ದಾರ್ ಮಹಾದೇವ ಸ್ವಾಮಿ, ಗ್ರೇಡ್–2 ತಹಶೀಲ್ದಾರ್ ಮಹಾದೇವಪ್ಪಗೌಡ ಬಿರಾದಾರ, ಜಿಲ್ಲಾಧಿಕಾರಿ ಕಾರ್ಯಾಲಯದ ಚುನಾವಣಾ ಶಿರಸ್ತೇದಾರ ಮಹೇಶ ಪಾಂಡವ ಇದ್ದರು.

# ಚಿತ್ರಕಲಾ ಶಿಬಿರ ಹಾಗೂ ಕಲಾಕೃತಿಗಳ ಪ್ರದರ್ಶನ–ರಾಯಚೂರು ಉತ್ಸವ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಅಂಗವಾಗಿ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡಿರುವ ಮೂರು ದಿನಗಳ ಚಿತ್ರಕಲಾ ಶಿಬಿರ ಹಾಗೂ ಕಲಾಕೃತಿಗಳ ಪ್ರದರ್ಶನ ಕಲಾಸಕ್ತರ ಗಮನ ಸೆಳೆಯುತ್ತಿವೆ.**

ಉತ್ಸವದ ಕೃಷಿ ಮೇಳ, ಆಹಾರ ಮೇಳ ಹಾಗೂ ಮುಖ್ಯ ವೇದಿಕೆಗಳಿಗೆ ತೆರಳುವ ಮಾರ್ಗದ ಆರಂಭದಲ್ಲಿಯೇ ಈ ಚಿತ್ರಕಲಾ ಶಿಬಿರದ ಮಳಿಗೆಗಳು ಇರುವ ಕಾರಣ ಹೆಚ್ಚಿನ ಸಂಖ್ಯೆಯ ಜನರು ಕಲಾಕೃತಿಗಳ ವೀಕ್ಷಣೆಗೆ ತೆರಳುವುದು ಸಾಮಾನ್ಯವಾಗಿದೆ. ಶಾಲಾ ಮಕ್ಕಳು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಕಲಾಕೃತಿಗಳನ್ನು ಆಸಕ್ತಿಯಿಂದ ವೀಕ್ಷಿಸುತ್ತಿರುವುದು ಶುಕ್ರವಾರ ಶಿಬಿರದಲ್ಲಿ ಕಂಡು ಬಂದಿತು. ಈ ಚಿತ್ರಕಲಾ ಶಿಬಿರ ಹಾಗೂ ಪ್ರದರ್ಶನದ11ಮಳಿಗೆಗಳಲ್ಲಿ ವಿವಿಧ ಚಿತ್ರ



ಕಲಾವಿದರು ಹಾಗೂ ಸಂಸ್ಥೆಗಳ ವತಿಯಿಂದ ಜಲವರ್ಣ, ತೈಲ ವರ್ಣ, ಅಕ್ರಲಿಕ್, ಪೋಸ್ಟರ್ ವರ್ಣ, ಪೆನ್ಸಿಲ್, ಇಂಕ್ ಮಾಧ್ಯಮಗಳಲ್ಲಿ ರಚಿಸಿದ 300ಕ್ಕೂ ಅಧಿಕ ಆಕರ್ಷಕ ಕಲಾಕೃತಿಗಳ ಪ್ರದರ್ಶನದ ಜೊತೆಗೆ ಮಾರಾಟಕ್ಕಿಡಲಾಗಿದೆ.

ಈ ಚಿತ್ರಕಲಾ ಶಿಬಿರಕ್ಕೆ ಜಿಲ್ಲಾಡಳಿತದ ವತಿಯಿಂದ ಜಿಲ್ಲೆಯ 25 ಚಿತ್ರ ಕಲಾವಿದರನ್ನು ಆಹ್ವಾನಿಸಿ ಸ್ಥಳದಲ್ಲೇ ಜಿಲ್ಲೆಯ ಐತಿಹಾಸಿಕ ಸ್ಮಾರಕಗಳು ಹಾಗೂ ಮಹತ್ವದ ಸ್ಥಳಗಳ ಚಿತ್ರ ಬರೆಯುವ ಜವಾಬ್ದಾರಿ ನೀಡಲಾಗಿದೆ. ಶುಕ್ರವಾರ ಆಹ್ವಾನಿತ ಕಲಾವಿದರು ಶಿಬಿರದಲ್ಲಿ ರಾಯಚೂರು ನಗರದ ಕಲ್ಲಾನೆ, ಶಕ್ತಿನಗರದಲ್ಲಿರುವ ಥರ್ಮಲ್ ವಿದ್ಯುತ್ ಸ್ಥಾವರ ಘಟಕ, ಮುದಗಲ್ ಕೋಟೆ ಸೇರಿದಂತೆ ಜಿಲ್ಲೆಯ ವಿವಿಧೆಡೆ ಇರುವ ಪುರಾತನ ಸ್ಮಾರಕಗಳ ಚಿತ್ರಗಳನ್ನು ಬರೆಯುತ್ತಿರುವುದು ಕಂಡು ಬಂದಿತು. 'ಶಿಬಿರದಲ್ಲಿ ಆಹ್ವಾನಿತ ಕಲಾವಿದರು ರಚಿಸಿರುವ ಜಿಲ್ಲೆಗೆ ಸಂಬಂಧಿಸಿದ ಐತಿಹಾಸಿಕ ಸ್ಮಾರಕಗಳು ಹಾಗೂ ಮಹತ್ವದ ಸ್ಥಳಗಳ ಕಲಾಕೃತಿಗಳನ್ನು ಶನಿವಾರ ಸಾರ್ವಜನಿಕವಾಗಿ ಪ್ರದರ್ಶನಕ್ಕಿಡಲಾಗುವುದು.

ಶಿಬಿರ ಮುಕ್ತಾಯವಾದ ನಂತರ ಈ ಎಲ್ಲಾ ಕಲಾಕೃತಿಗಳನ್ನು ಜಿಲ್ಲಾಡಳಿತಕ್ಕೆ ನೀಡಲಾಗುವುದು. ರಾಯಚೂರು ನಗರದ ನೂತನ ಜಿಲ್ಲಾಡಳಿತ ಭವನ ( ಜಿಲ್ಲಾಧಿಕಾರಿ ಕಚೇರಿ)ದಲ್ಲಿ ಕಾಯಂ ಆಗಿ ಸಾರ್ವಜನಿಕರ ವೀಕ್ಷಣೆಗೆ ಲಭ್ಯವಾಗುವಂತೆ ಈ ಕಲಾಕೃತಿಗಳನ್ನು ಅಳವಡಿಸಲು ಅಧಿಕಾರಿಗಳು ನಿರ್ಧರಿಸಿದ್ದಾರೆ' ಎಂದು ಹಿರಿಯ ಕಲಾವಿದರಾದ ಎಚ್.ಎಚ್. ಮ್ಯಾದರ್ ಹಾಗೂ ಪಿ.ಚಂದ್ರಶೇಖರ ತಿಳಿಸಿದರು. ಜಿಲ್ಲಾಡಳಿತ ಜಿಲ್ಲಾ ಉತ್ಸವದ ಪ್ರಯುಕ್ತ ನಮಗೆ ಜಿಲ್ಲೆಯ ಐತಿಹಾಸಿಕ ಸ್ಮಾರಕಗಳ ಚಿತ್ರ ರಚನೆಗೆ ಅತ್ಯುತ್ತಮ ಅವಕಾಶ ಕಲ್ಪಿಸಿದೆ' ಎಂದು ಈ ಚಿತ್ರಕಲಾ ಶಿಬಿರದಲ್ಲಿ ಭಾಗವಹಿಸಿದ್ದ ಮಾನ್ವಿ ಪಟ್ಟಣದ ಕಲಾವಿದ ರವಿ ನಾಯಕ ಹರ್ಷ ವ್ಯಕ್ತಪಡಿಸಿದರು.

# ಮೂಲ ಸೌಕರ್ಯ ಕಲ್ಪಿಸಲು ಬದ್ಧ: ಶಾಸಕ ಹಿಟ್ನಾಳ



❑ ನೈಜ್ಯ ದೆಸೆ ನ್ಯೂಸ್

**ರಸ್ತೆ, ಕುಡಿಯುವ ನೀರು, ಚರಂಡಿ ಸೇ–ರಿದಂತೆ ಭಾಗ್ಯನಗರ ಪಟ್ಟಣ ಪಂಚಾಯತಿಗೆ ಮೂಲಸೌಕರ್ಯ ಕಲ್ಪಿಸಲು ಬದ್ಧ ಎಂದು ಶಾಸಕ ರಾಘವೇಂದ್ರ ಹಿಟ್ನಾಳ ಹೇಳಿದರು.**

ಭಾಗ್ಯನಗರದಲ್ಲಿ ಓಜನಹಳ್ಳಿ ಕ್ರಾಸ್‌ನಿಂದ ಗಣೇಶನಗರದವರೆಗೆ ನಿರ್ಮಿಸುತ್ತಿರುವ ರಸ್ತೆ ಕಾಮಗಾ–ರಿಯನ್ನು ಶುಕ್ರವಾರ ವೀಕ್ಷಿಸಿ ಮಾತನಾಡಿದ ಅವರು 'ಭಾಗ್ಯನಗರದಲ್ಲಿ ?5 ಕೋಟಿ ವೆಚ್ಚದಲ್ಲಿ ರಸ್ತೆ ನಿರ್ಮಿಸಲಾಗುತ್ತಿದೆ. ಈಗಾಗಲೇ ?4 ಕೋಟಿ ಬಿಡುಗಡೆಯಾಗಿದ್ದು, ಶೀಘ್ರವೇ ಉಳಿದ ಅನುದಾನ ಒದಗಿಸುವೆ. 821 ಮೀಟರ್ ಉದ್ದದ ರಸ್ತೆ ನಿರ್ಮಾಣವಾಗಲಿದೆ. ಎರಡು ಕಡೆಗಳಲ್ಲಿ ಚರಂಡಿ ನಿರ್ಮಿಸಲಾಗುವುದು' ಎಂದು ತಿಳಿಸಿದರು. ಸ್ವಾಮಿ ವಿವೇಕಾನಂದ ಶಾಲೆಯಿಂದ ಸಂಪರ್ಕ ಕಲ್ಪಿಸುವ ಈ ರಸ್ತೆಗೆ ರೈಲ್ವೆ ಕೆಳಸೇತುವೆ ನಿರ್ಮಿಸಬೇಕಿದೆ.

ಈ ಸಂಬಂಧ ಸಂಸದ ರಾಜಶೇಖರ ಹಿಟ್ನಾಳ ಜೊತೆ ಚರ್ಚಿಸಿ ಕಿನ್ನಾಳ ರಸ್ತೆಯಲ್ಲಿರುವ ಇರುವಂತೆ ಕೆಳ ಸೇತುವೆ ನಿರ್ಮಿಸಬೇಕಿದೆ ಎಂದರು. ಭಾಗ್ಯನಗರ ಪಟ್ಟಣ ಪಂಚಾಯತ್ ಅಧ್ಯಕ್ಷ ರಮೇಶ್ ಹ್ಯಾಟಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಸನ್ನ ಗಡಾದ್, ಪಟ್ಟಣ ಪಂಚಾಯತ್ ಸದಸ್ಯರಾದ ಜಗದೀಶ್ ಮಾಲಗಿತ್ತಿ, ಗವಿಸಿದ್ದಪ್ಪ ಮಗಿಮಾವಿನಹಳ್ಳಿ, ಪ್ರಾಧಿಕಾರದ ಮಾಜಿ ಅಧ್ಯಕ್ಷ ಶ್ರೀನಿವಾಸ್ ಗುಪ್ತಾ, ಮುಖಂಡ ಎಸ್.ಬಿ.ನಾಗರಳ್ಳಿ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣ ಇಟ್ಟಂಗಿ, ನಗರಸಭೆ ಪೌರಾಯುಕ್ತ ವೆಂಕಟೇಶ ನಾಗನೂರು, ಪುರಸಭೆ ಮುಖ್ಯಾಧಿಕಾರಿ ಸುರೇಶ ಬಬಲಾದ,

# ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಪೂರ್ವಭಾವಿ ಸಭೆ

**ಕೊಪ್ಪಳ: ಫೆಬ್ರವರಿ 23 ರಂದು ಜಿಲ್ಲಾ ಕೇಂದ್ರದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಅಧಿಕಾರಿಗಳು ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಅವರು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚ–'ರಣೆ ಕುರಿತು ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.**

ಸಮಾಜದ ಮುಖಂಡರ ಕೋ–ರಿಕೆಯ ಮೇರೆಗೆ ಕೊಪ್ಪಳ ಜಿಲ್ಲಾ ಮಟ್ಟದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚ–'ರಣೆಯನ್ನು ಫೆ.19ರ ಬದಲಿಗೆ ಫೆ. 23 ರಂದು ಆಚರಿಸಲಾಗುವುದು. ಅಂದು ಬೆಳಿಗ್ಗೆ 10 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ವೇದಿಕೆ ಸಮಾರಂಭ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಪೂಜೆ, ಛತ್ರಪತಿ ಶಿವಾಜಿ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯಕ್ರಮಗಳು ನಡೆಯಲಿದೆ. ವೇದಿಕೆ ಕಾರ್ಯಕ್ರಮದ ಬಳಿಕ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರದ ಮೆರವಣಿಗೆಯು ಸಾಹಿತ್ಯ ಭವನದಿಂದ ಪ್ರಾರಂಭಗೊ0ಡು ಜವಾಹರ ರಸ್ತೆ ಮೂಲಕ ಗಡಿಯಾರ ಕಂಬದ ಹತ್ತಿರದ ಕೋಟೆ ರಸ್ತೆಯಲ್ಲಿರುವ ಛತ್ರಪತಿ ಶಿವಾಜಿ ವೃತ್ತದವರೆಗೆ ಜರುಗಲಿದೆ ಎಂದು ಅವರು ತಿಳಿಸಿದರು.

ಸಮಾರಂಭ ದಿನದಂದು, ಮೆರವಣಿಗೆ ಮಾರ್ಗದ ಸ್ವಚ್ಛತೆ, ಕಾರ್ಯಕ್ರಮದ ಸ್ಥಳದ ಸ್ವಚ್ಛತೆ, ಮೆರವಣಿಗೆಯಲ್ಲಿ ಹಾಗೂ ವೇದಿಕೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ನಗರಸಭೆಯಿಂದ ಒದಗಿಸಬೇಕು. ಜಿಲ್ಲಾ ಮಟ್ಟದ ಜಯಂತಿ ಆಚರಣೆ ಕಾರ್ಯಕ್ರಮಕ್ಕಾಗಿ ಸಂಬ0ಧಿಸಿದ ಎಲ್ಲ ಇಲಾಖೆಗಳ ಅಧಿಕಾ–ರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸಂಬ0ಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಯಂತಿ ಕಾರ್ಯಕ್ರಮ ಯಶಸ್ವಿಗೆ ಸಮಾಜದ ಎಲ್ಲಾ ಮುಖಂಡರು, ಸಾರ್ವಜನಿಕರು ಸಹಕ–ರಿಸಬೇಕು ಎಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ, ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಎ. ಬಸವರಾಜ, ಸಮಾಜದ ಮುಖಂಡರಾದ ಮಾರುತಿ ಎನ್., ಉಮೇಶ ಸುರ್ವೆ, ವಿಶ್ವನಾಥ ಅರಿಕೇರಿ, ಗವಿಸಿದ್ದಪ್ಪ ನಿಂಬಾಳ್ಕರ, ರಮೇಶ ಘೋರ್ಪಡೆ, ಹನುಮಂತ ಕಾರಟಗಿ, ಕೃಷ್ಣಾಜಿ ಬೋಸಲೆ ಸೇರಿದಂತೆ ಮತ್ತಿತರರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



## ನೇಮಕಾತಿ ಪ್ರಕಟಣೆ

ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ನೇಮಕಾತಿ 2026 ರಲ್ಲಿ 350 ವಿದೇಶಿ ವಿನಿಮಯ ಅಧಿಕಾರಿ, ಮಾರ್ಕೆಟಿಂಗ್ ಅಧಿಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲಾಗಿದೆ. ಯಾವುದೇ ಪದವಿ, ಎಂಬಿಎ/ಪಿಜಿಡಿಎಂ ಹೊಂದಿರುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಅರ್ಜಿಯು 20–01–2026 ರಂದು ಪ್ರಾರಂಭವಾಗುತ್ತದೆ ಮತ್ತು 15–02–2026 ರಂದು ಮುಕ್ತಾಯಗೊಳ್ಳುತ್ತದೆ. ಅಭ್ಯರ್ಥಿಯು ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ವೆಬ್‌ಸೈಟ್, centralbankofindia.bank.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.
ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ನೇಮಕಾತಿ 2026 ಅಧಿಸೂಚನೆ ದಿನಾಂಕ 19/01/2026
ಸಿಬಿಐ ಆನ್‌ಲೈನ್ ಫಾರ್ಮ್ 2026 ಪ್ರಾರಂಭ ದಿನಾಂಕ 20/01/2026
ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ಉದ್ಯೋಗಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ವಿಸ್ತರಿಸಲಾಗಿದೆ 2026 15/02/2026
ಶುಲ್ಕ ಪಾವತಿ ಕೊನೆಯ ದಿನಾಂಕ 03/02/2026
ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ 2026 ಪ್ರವೇಶ ಕಾರ್ಡ್ ಬಿಡುಗಡೆಯನ್ನು ಪ್ರಕಟಿಸಲಾಗುವುದು..

# ಭಾರತಕ್ಕೆ ಶ್ರೇಷ್ಠ ಆಧ್ಯಾತ್ಮಿಕ ಪರಂಪರೆ: ಶಾಂತಗೌಡ ನಡಹಳ್ಳಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಭಾರತ ಇಡೀ ವಿಶ್ವದಲ್ಲಿಯೇ ಶ್ರೀಮಂತ ಸಂಸ್ಕೃತಿ ಹಾಗೂ ಸಂಸ್ಕಾರಗಳನ್ನು ಹೊಂದಿದ ರಾಷ್ಟ್ರವಾಗಿದೆ. ಭಾರತ ಹಬ್ಬಗಳ ದೇಶವಾಗಿದ್ದು ನಮ್ಮ ಗ್ರಾಮೀಣ ಭಾಗದಲ್ಲಿ ಆಚರಿಸುವ ಹಬ್ಬ ಹಾಗೂ ಜಾತ್ರೆಗಳು ಕೇವಲ ಸಂಪ್ರದಾಯ ವಾಗಿರದೆ ಗ್ರಾಮೀಣ ಸಂಸ್ಕೃತಿ ಮತ್ತು ನಮ್ಮ ಪರಂಪರೆಯನ್ನು ಪ್ರತಿಬಿಂಬಿಸುವ ಕಾರ್ಯಕ್ರಮವಾಗಿವೆ ಎಂದು ಕಾಂಗ್ರೆಸ್ ಮುಖಂಡ ಶಾಂತಗೌಡ ಪಾಟೀಲ(ನಡಹಳ್ಳಿ) ಹೇಳಿದರು.**

ಶುಕ್ರವಾರ ತಾಲೂಕಿನ ಸುಕ್ಷೇತ್ರ ಹಡಗಿನಾಳ ಗ್ರಾಮದ ಶ್ರೀ ಗ್ರಾಮ ದೇವತೆ ಜಾತ್ರಾ ಮಹೋತ್ಸವ ಅಂಗವಾಗಿ ಹಮ್ಮಿಕೊಂಡ "ಮಾತು ಬಿದ್ದಿತು ಮೌನ ಗೆದ್ದಿತು" ನಾಟಕ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಗ್ರಾಮೀಣ ಭಾಗದಲ್ಲಿರುವ



ನಮ್ಮ ತಾಯಂದಿರು ತಮ್ಮ ಮಕ್ಕಳಿಗೆ ಶಿಕ್ಷಣದೊಂದಿಗೆ ಒಳ್ಳೆಯ ಸಂಸ್ಕಾರಗಳನ್ನು ಕೊಡಲು ಪ್ರಯತ್ನಿಸಬೇಕು ಸಂಸ್ಕಾರಯುತ ವ್ಯಕ್ತಿ ಮಾತ್ರ ದೇಶದ ಒಳ್ಳೆಯ ಪ್ರಜೆ ಆಗಲು ಸಾಧ್ಯ ಎಂದರು. ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ ಮಾತನಾಡಿ 9 ವರ್ಷಗಳ ನಂತರ ಗ್ರಾಮದಲ್ಲಿ ಎಲ್ಲರೂ ಒಂದಾಗಿ ಈ ಜಾತ್ರೆಯನ್ನು ಆಚರಿಸುತ್ತಿರುವುದು ಸಂತಸದ ವಿಷಯ ಇದನ್ನು ಮುಂದುವರೆಸಿಕೊಂಡು ಹೋಗಬೇಕು. ನಾಟಕಗಳನ್ನು ಕೇವಲ ಮನೋರಂಜನೆಗಾಗಿ ನೋಡದೆ ಅದರ ತಿರುಳನ್ನು ತಿಳಿದುಕೊಳ್ಳಲು ಪ್ರಯತ್ನಿಸಬೇಕು ಎಂದರು.

ಉಪನ್ಯಾಸಕ ಮಲ್ಲಿಕಾರ್ಜುನ ದೇಶಮಾನ್ಯ ಅವರು ಹಡಗಿನಾಳ ಐತಿಹಾಸಿಕ ಹಿನ್ನೆಲೆ ಇರುವ ಗ್ರಾಮ, ಇಲ್ಲಿ ಬಹಳಷ್ಟು ಅಭಿವೃದ್ಧಿಯ ಕಾರ್ಯಗಳು ಆಗಬೇಕಾಗಿದೆ. ಗ್ರಾಮದಲ್ಲಿ ಶಾಲೆ ಇದೆಯಾದರೂ ಕೋಣೆಗಳ ಸಮಸ್ಯೆ ಇದೆ ನಮ್ಮ ಪ್ರತಿನಿಧಿಗಳು ಇದರ ಕುರಿತು ಗಮನ ಹರಿಸಬೇಕು. ಮೂಲಭೂತ ಸೌಕರ್ಯಗಳಿಗೆ ಒತ್ತು ಕೊಟ್ಟು ಕೆಲಸ ಮಾಡಬೇಕಾಗಿದೆ, ಎಲ್ಲರೂ ಒಂದಾಗಿ ಈ ಜಾತ್ರೆಯನ್ನು ಆಚರಿಸುತ್ತಿದ್ದೇವೆ ಇದನ್ನು ಮುಂದಿರಿಸಿಕೊಂಡು ಹೋಗೋಣ ಎಂದರು.

ಕಾರ್ಯಕ್ರಮದಲ್ಲಿ ಮುಖಂಡರಾದ ಶಿವರಾಜ ಗುಂಡಕನಾಳ, ವೀರೇಶ ಬಾಗೇವಾಡಿ, ಬಸವರಾಜ ಕುಂಬಾರ, ಸಂಗನಗೌಡ ಅಸ್ಕಿ, ಸಂಗಮೇಶ ದೇಸಾಯಿ, ಮಲ್ಲಿಕಾರ್ಜುನ ಮದರಕಲ್, ಮಹಾದೇವಪ್ಪಗೌಡ ದೇಸಾಯಿ, ಶಿವಕುಮಾರ ದೇಶಮಾನ್ಯ,ಕಾಶಿನಾಥ ದೇಸಾಯಿ, ಶಾಂತಗೌಡ ದೇಸಾಯಿ, ಗೌಡಪ್ಪಗೌಡ ದೇಸಾಯಿ, ಚನ್ನಪ್ಪಗೌಡ ದೇಸಾಯಿ, ನಿಂಗನಗೌಡ ದೇಸಾಯಿ, ಸಿಂಧೂರಲಕ್ಷ್ಮಣ ವಾಲೀಕಾರ ಮತ್ತಿತರರು ಇದ್ದರು. ಐಶ್ವರ್ಯ ದೇಶಮಾನ್ಯ ಪ್ರಾರ್ಥಿಸಿದರು.ಭಾಗ್ಯಾ ತಾಳಿಕೋಟಿ ಭಕ್ತಿ ಗೀತೆ ಹಾಡಿದರು. ಶಿವಕುಮಾರ ದೇಶಮಾನ್ಯ ನಿರೂಪಿಸಿದರು. ಶಿಕ್ಷಕಿ ವಿದ್ಯಾಶ್ರೀ ಡಿ.ವಂದಿಸಿದರು.

## ಮಸೀದಿಗೆ ಆಗಮಿಸಿ ಆರೆಸ್ಸೆಸ್ ಶತಾಬ್ದಿ ಕಾರ್ಯಕ್ರಮಕ್ಕೆ ಆಹ್ವಾನಿಸಿದ ಸ್ವಾಮೀಜಿ

ನೈಜ್ಯ ದೆಸೆ ನ್ಯೂಸ್

**ಆರೆಸ್ಸೆಸ್ ಸಂಘದ ಶತಾಬ್ದಿ ವರ್ಷಾಚರಣೆ ಹಾಗೂ ಹಿಂದೂ ಸಮಾಜೋತ್ಸವದ ಅಂಗವಾಗಿ ಮುಸ್ಲಿಮರಿಗೆ ಆಹ್ವಾನ ನೀಡುವ ಉದ್ದೇಶದಿಂದ ಮಹದೇವ ಸ್ವಾಮೀಜಿ ಮಸೀದಿಗೆ ಭೇಟಿ ನೀಡಿದರು.ಈ ವೇಳೆ ಮಾತನಾಡಿದ ಅವರು, ಧರ್ಮಭೇದಗಳನ್ನು ಮೀರಿದ ಮನುಷ್ಯತ್ವ ಮತ್ತು ಸಹಬಾಳ್ವೆಯ ಪರಂಪರೆ ಈ ನಾಡಿನ ಶಕ್ತಿಯಾಗಿದೆ ಎಂದು ಹೇಳಿದರು.**

ಮುಸ್ಲಿಂ ಅಂಜುಮನ್ ಕಮೀಟಿ ಅಧ್ಯಕ್ಷ ರಷೀದ್ ಅಹ್ಮದ್ ಹಣಜಗಿರಿ ಮಾತನಾಡಿ, ಧರ್ಮಕ್ಕಿಂತ ಮನುಷ್ಯತ್ವವೇ ದೊಡ್ಡದು. ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯ ಉಳಿಯಬೇಕೆಂದರೆ ಪರಸ್ಪರ ಗೌರವ ಮತ್ತು ವಿಶ್ವಾಸ ಅಗತ್ಯ ಎಂದು ಅಭಿಪ್ರಾಯಪಟ್ಟರು.



ಬಸನಗೌಡ ತೊಂಡಿಹಾಳ ಅವರು, ಕುಕನೂರಿನ ಸೌಹಾರ್ದ ಪರಂಪರೆ ಎಲ್ಲರಿಗೂ ಮಾದರಿಯಾಗಿದೆ ಎಂದರು. ಅಂದಪ್ಪ ಜವಳಿ ಅವರು ಸಮಾಜೋತ್ಸವವನ್ನು ಎಲ್ಲ ಸಮುದಾಯಗಳ ಸಹಕಾರದೊಂದಿಗೆ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಜಯಂತಿಗಳ ಅರ್ಥಪೂರ್ಣ ಆಚರಣೆಗೆ ನಿರ್ಧಾರ



ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕ ಆಡಳಿತ ವತಿಯಿಂದ ಆಚರಿಸಲಿರುವ ಸಂತ ಸೇವಾಲಾಲ್,ಛತ್ರಪತಿ ಶಿವಾಜಿ ಮಹಾರಾಜ ಹಾಗೂ ಸಂತ ಕವಿ ಸರ್ವಜ್ಞ ನವರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಲು ತಹಶೀಲ್ದಾರ ಕಾರ್ಯಾಲಯದ ಸಭಾಂಗಣದಲ್ಲಿ ಶನಿವಾರ ನಡೆದ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು.**

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ತಹಸಿಲ್ದಾರ್ ಡಾ.ವಿನಯಾ ಹೂಗಾರ ಅವರು ಫೆಬ್ರವರಿ 15ರಂದು ಶ್ರೀ ಸಂತ ಸೇವಾಲಾಲ್ ಜಯಂತಿ,19 ರಂದು ಛತ್ರಪತಿ ಶಿವಾಜಿ ಮಹಾರಾಜ ಹಾಗೂ ಫೆಬ್ರವರಿ 20ರಂದು ಸಂತ ಕವಿ ಸರ್ವಜ್ಞ ನವರ ಜಯಂತಿಗಳು ಆಚರಿಸಲಿದ್ದು ಸದರಿ ಜಯಂತಿಗಳು ಯಶಸ್ವಿಗೆ ತಾಲೂಕ ಮಟ್ಟದ ಅಧಿಕಾರಿಗಳು ಎಲ್ಲ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಮೂವರೂ ಮಹಾಪುರುಷರ ಜಯಂತಿಗಳ ಆಚರಣೆಯಲ್ಲಿ ಯಾವುದೇ ರೀತಿಯ ಲೋಪಗಳು ಆಗದಂತೆ ನೋಡಿಕೊಳ್ಳಬೇಕು ಇದಕ್ಕೆ ಸಂಬಂಧಿಸಿದ ಸಮಾಜದ ಬಾಂಧವರೂ ಸಹಕರಿಸಬೇಕು ಎಂದರು.

ಸಭೆಯಲ್ಲಿ ಸಂತ ಸೇವಾಲಾಲ್ ಸಮಾಜದ ಅಧ್ಯಕ್ಷ ಶಂಕರ್ ಎಂ.ಚೌಹಾಣ, ಮರಾಠ ಸಮಾಜದ ಅಧ್ಯಕ್ಷ ಸಂಭಾಜಿ–ರಾವ್ ವಾಡಕರ್, ಕುಂಬಾರ ಸಮಾಜದ ಅಧ್ಯಕ್ಷ ಮಲ್ಲಿಕಾರ್ಜುನ ಕುಂಬಾರ, ಗಣ್ಯರಾದ ಕಾಶಿರಾಯಾ ಮೋಹಿತೆ, ಶಶಿಧರ ಡಿಸಲೆ, ಅಣ್ಣಾಜಿರಾವ್ ಜಗತಾಪ,ವಿಠಲ್ ಮೋಹಿತೆ, ಪಿಎಸ್ಐ(ಅ.ವಿ.) ಎಸ್.ಎಂ.ಪಡಶಟ್ಟಿ, ಪುರಸಭೆ ಕಂದಾಯ ಅಧಿಕಾರಿ ಸುರೇಶ ಅಮರಣ್ಣವರ, ಶಿರಸ್ತೆದಾರ ಜೆ.ಆರ್. ಜೈನಾಪೂರ,ಸಿಆರ್ಸಿ ರಾಜು ವಿಜಾಪುರ, ಸಮಾಜ ಕಲ್ಯಾಣ ಇಲಾಖೆಯ ಎಸ್ ಎಂ ಕಲಬುರ್ಗಿ, ಕೆಕೆಆರ್‌ಟಿಸಿ ಬಿ.ಬಿ. ಚೋಕಾವಿ, ಎಪಿಎಂಸಿಯ ಎಸ್.ಆರ್.ಮಠ,ಸಿ.ಟಿ.ಸರ್ವೆಯ ರವಿ ನಾಯಕ ಹಾಗೂ ತಹಸಿಲ್ದಾರ್ ಕಾರ್ಯಾಲಯದ ಸಿಬ್ಬಂದಿಗಳು ಇದ್ದರು.

# ರಾಯಚೂರು ಉತ್ಸವ–ರಾಜೇಶ್ ಕೃಷ್ಣನ್,ಆಳ್ವಾಸ್ ನೃತ್ಯ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಎರಡನೇ ದಿನದ ಕಾರ್ಯಕ್ರಮಗಳಿಗೆ ಜನ ಸಾಗರವೇ ಹ–ರಿದು ಬಂದಿತು. ಭಾರಿ ಸಂಖ್ಯೆಯಲ್ಲಿ ಸೇರಿದ್ದ ಜನ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವೀಕ್ಷಿಸಿ ಸಂಭ್ರಮಿಸಿದರು.ಕಿವಿಗಡಚಿಕ್ಕುವ ಸಂಗೀತವು ಪ್ರೇಕ್ಷಕರ ಮೈನವಿರೇಳುಸುವಂತೆ ಮಾಡಿತು. ಯುವಕರು ಸಂಗೀತ ಹೆಜ್ಜೆ ಕುಣಿದರೆ, ಮಕ್ಕಳು ಸಹ ಕುಣಿದು ಕುಪ್ಪಳಿಸಿದರು. ವೇದಿಕೆಯಲ್ಲಿನ ಕಲಾವಿದರಲ್ಲೂ ಇನ್ನಷ್ಟು ಉತ್ಸಾಹ ತುಂಬಿದರು.**

ಗಾಯಕ ರಾಜೇಶ್ ಕೃಷ್ಣನ್ ಅವರು ಸುಮಾರು ಒಂದೂವರೆ ತಾಸು ಸಂಗೀತ ಕಾರ್ಯಕ್ರಮ ನೀಡಿ ಸಂಗೀತ



ಸೋತೃಗಳ ಮನ ತಣಿಸಿದರು. ಸಾಂಸ್ಕೃತಿ–ಕ ಕಾರ್ಯಕ್ರಮ ವೀಕ್ಷಣೆಗೆ ಸಂಜೆ 4 ಗಂಟೆಗೆ ಜನ ಪ್ರೇಕ್ಷಕರ ಆಸನಗಳಲ್ಲಿ ಬಂದು ಕುಳಿತಿದ್ದರು. 25 ಸಾವಿರ ಆಸನಗಳನ್ನು ಹಾಕಿದ್ದರು. ಎಲ್ಲ ಕುರ್ಚಿಗಳು ಭರ್ತಿಯಾದ ಕಾರಣ ಜನ ಜಿಮಖಾನಾ ಕಟ್ಟಡದ ಮೇಲೆ ಏರಿ ಕುಳಿತು ಕಾರ್ಯಕ್ರಮ ವೀಕ್ಷಿಸಿದರು. ಸಂಗೀತ ಪ್ರೇಮಿಗಳು ಕಾರ್ಯಕ್ರಮದ ಆನಂದ ಸವಿಯುವಂತಾಗಲು ಅಲ್ಲಲ್ಲಿ 10 ಕಡೆ ಪ್ಲಾಸ್ಮಾಟಿವಿಗಳನ್ನು ಅಳವಡಿಸಲಾಗಿ–ತ್ತು. ಪ್ಲಾಸ್ಮಾಟಿವಿಗಳ ಮುಂದೆಯೂ ಜನ ಭಾರಿ ಸಂಖ್ಯೆಯಲ್ಲಿ ನೆರೆದಿದ್ದರು.

ಇದಕ್ಕೂ ಮೊದಲು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿನ ಮುಖ್ಯ ವೇದಿಕೆಯಲ್ಲಿ ಡಿಕೆಡಿ ತಂಡದವರು ಆಕರ್ಷಕ ನೃತ್ಯ ಪ್ರದರ್ಶಿಸಿದರು. ಆಳ್ವಾಸ್ ತಂಡದ ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮದ ಮೂಲಕ ಪ್ರೇಕ್ಷಕರ ಮನ ಸೆಳೆದರು. ಭಾರಿ ಸಂಖ್ಯೆಯಲ್ಲಿ ನೆರೆದಿದ್ದ ಜನ ಸಮೂಹವನ್ನು ನಿಯಂತ್ರಿಸಲು ಪೊಲೀಸರು ಪ್ರಯಾಸ ಪಡಬೇಕಾಯಿತು. ಲಿಂಗಸುಗೂರು ರಸ್ತೆಯಲ್ಲಿ ಒಟ್ಟು ಮೂರು ಕಡೆ ವಾಹನ ನಿಲುಗಡೆಗೆ ವ್ಯವಸ್ಥೆ ಮಾಡಲಾಗಿತ್ತು. ವಾಹನ ದಟ್ಟಣೆ ಹೆಚ್ಚಾದ ಕಾರಣ ಎಸ್‌ಬಿಐ ಬ್ಯಾಂಕಿನ ಹಿಂಭಾಗದ ಖುಲ್ಲಾ ಜಾಗದಲ್ಲಿ ವಾಹನಗಳ ನಿಲುಗಡೆಗೆ ವ್ಯವಸ್ಥೆ ಮಾಡಲಾಯಿತು.

# ಸಿಂಧನೂರು ಮತ್ತು ಮಸ್ಕಿಯ ಸಂತೆ ನೋಡದ ನನಗೆ ಊರೂರು ಸುತ್ತಿ ದೇವಸ್ಥಾನಗಳ ದರ್ಶನಕ್ಕೆ ಶಕ್ತಿ ಯೋಜನೆ ಸಹಕಾರಿಯಾಯ್ತು: ಫಲಾನುಭವಿಯ ಮನದಾಳ ಮಾತು

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಜಿಲ್ಲೆಯ ಸಿಂಧನೂರು ಮತ್ತು ಮಸ್ಕಿಯ ಸಂತೆಯನ್ನೇ ನೋಡದೇ ಇದ್ದ ನನಗೆ ಊರೂರು ಸುತ್ತಿ ದೇವಸ್ಥಾನಗಳ ದರ್ಶನಕ್ಕೆ ರಾಜ್ಯ ಸರ್ಕಾರದ ಶಕ್ತಿ ಯೋಜನೆಯು ತುಂಬಾ ಸಹಕಾ–ರಿಯಾಗಿದೆ ಎಂದು ಮಸ್ಕಿ ತಾಲ್ಲೂಕಿನ ಗ್ರಾಮವೊಂದರ ನಿವಾಸಿ ಬಾಳಮ್ಮ ಎಂಬ ಫಲಾನುಭವಿಯು ತಮ್ಮ ಮನದಾಳದ ಮಾತನ್ನು ಹೇಳಿದರು.**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ನಿಮಿತ್ತ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆ ಇವರುಗಳ ಸಂ–ಯುಕ್ತಾಶ್ರಯದಲ್ಲಿ ಶನಿವಾರದಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಕಾರ್ಯಗಾರದಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಖುಷಿಯಿಂದ ಮಾತನಾಡಿದರು. ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣದ ಮೂಲಕ ಉಡುಪಿ, ಮಂಗಳೂರು ಸೇರಿದಂತೆ ಹಲವಾರು ಊರುಗಳನ್ನು ನೋಡಿದ್ದೇನೆ ಮತ್ತು ವಿಶೇಷವಾಗಿ ಕೃಷ್ಣ ದೇವಸ್ಥಾನ ಮತ್ತು ಇತರೆ ದೇವಸ್ಥಾನಗಳು ಸೇರಿದಂತೆ ನಮ್ಮ ರಾಜ್ಯದ ವಿವಿಧ ಪುಣ್ಯ ಕ್ಷೇತ್ರಗಳಿಗೆ ತೆರಳಿ ದೇವರ ದರ್ಶನ ಪಡೆದಿದ್ದೇನೆ.

ಇದಕ್ಕಾಗಿ ಈ ಯೋಜನೆಯನ್ನು ಜಾರಿ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವ–ರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದು ಬಾಳಮ್ಮ ಅವರು ಹೇಳುವಾಗ ಅವರ ಕಣ್ಣಿನಲ್ಲಿ ಧನ್ಯತಾಭಾವ ಎದ್ದು ಕಾಣುತ್ತಿತ್ತು. ಅನ್ನಭಾಗ್ಯ ಯೋಜನೆಯ ಫಲಾನುಭವಿ ನಾಗರತ್ನ ಅವರು ಮಾತನಾಡಿ, ಅನ್ನಭಾಗ್ಯ ಕೇವಲ ಒಂದು ಯೋಜನೆಯಲ್ಲಾ. ಅದು ಬಡವರ ಹಸಿವನ್ನು







ನೀಗಿಸುವಂತಹ ಮಾನವಿಯತೆಯ ಮಹಾನ್ ಕಾರ್ಯವಾಗಿದೆ. ಬೇರೆ ಬೇರೆ ವಿಷಯದಲ್ಲಿ ಆತ್ಮಹತ್ಯೆ ಮಾಡುವುದನ್ನು ಕಾಣುತ್ತೇವೆ. ಆದ–ರೆ, ನಮ್ಮ ರಾಜ್ಯದಲ್ಲಿ ಹಸಿವಿನಿಂದ ಆತ್ಮಹತ್ಯೆ ಮಾಡಿಕೊಂಡಿರುವ ಯಾವುದೇ ಪ್ರಕರಣ ಕಂಡುಬಂದಿರುವುದಿಲ್ಲ. ಇದಕ್ಕೆ ಕಾರಣ ಸರ್ಕಾರ ಕೊಟ್ಟಿರುವ ಅನ್ನಭಾಗ್ಯ ಯೋಜನೆಯೇ ಆಗಿದೆ. ಇದರಿಂದ ನಮ್ಮಂತಹ ಬಡವ–ರಿಗೆ ತುಂಬಾ ಅನುಕೂಲವಾಗಿದೆ. ಮೂರೊತ್ತು ನೆಮ್ಮದಿಯಿಂದ ಊಟ ಮಾಡುತ್ತಿದ್ದೇವೆ ಎಂದರು. ಫಲಾನುಭವಿ ಬೂದೆಮ್ಮ ಅವರು ಮಾತನಾಡಿ, ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು ಬರುವಂತಹ ಹಣವನ್ನು ಕೂಡಿಟ್ಟು ಬಟ್ಟೆ ವ್ಯಾಪಾರವನ್ನು ಪ್ರಾರಂಭಿಸಿದ್ದೇನೆ.

ಇದರಿಂದ ಬರುವ ಲಾಭವನ್ನು ಕುಟುಂಬ ನಿರ್ವಹಣೆಗೆ ಮತ್ತು ನನ್ನ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಬಳಕೆ ಮಾಡಿಕೊಳ್ಳುತ್ತಿದ್ದೇನೆ. ಈ ಯೋಜನೆಯಿಂದ ನಮ್ಮ ಕುಟುಂಬಕ್ಕೆ ಆರ್ಥಿಕವಾಗಿ ಶಕ್ತಿ ಸಿಕ್ಕಂತಾಗಿದೆ. ಯೋಜನೆಯಡಿ ಕಾಲಕಾಲಕ್ಕೆ ಸರ್ಕಾರ ನಮಗೆ ಹಣ ಹಾಕುವುದನ್ನು ನಾವು ಬಯಸುತ್ತೇವೆಎಂದು ಹೇಳಿದರು. ಗೃಹಜ್ಯೋತಿ ಯೋಜನೆಯ ಫಲಾನುಭವಿ ನೇತ್ರಾವತಿ ಅವರು ಮಾತನಾಡಿ, ಈ ಹಿಂದೆ ನಮ್ಮ ಮನೆಯ ವಿದ್ಯುತ್ ಬಿಲ್ ಪ್ರತಿ ತಿಂಗಳು 700 ರಿಂದ 800 ರೂ. ಬರುತ್ತಿತ್ತು. ಗೃಹಜ್ಯೋತಿ ಯೋಜನೆ ಜಾರಿಯಾದಾಗಿನಿಂದ ವಿದ್ಯುತ್ ಬಿಲ್ ಶೂನ್ಯ ಬರುತ್ತಿದ್ದು, ಈ ಹಣ ನಮಗೆ ಉಳಿತಾಯವಾಗಿದೆ. ಇದಕ್ಕಾಗಿ ನಾನು ರಾಜ್ಯ ಸರ್ಕಾರಕ್ಕೆ ಧನ್ಯವಾದಗಳನ್ನು ತಿಳಿಸುತ್ತೇನೆ ಎಂದರು. ಶಕ್ತಿ ಯೋಜನೆಯ ಫಲಾನುಭವಿ ನಾಗರತ್ನ ಅವರು ಮಾತನಾಡಿ, ನಾನು ದೇವದಾಸಿ ಮಹಿಳೆಯರ ಪುನರ್ವಸತಿ ಕಾರ್ಯಕರ್ತೆ ಯಾಗಿ ಕೆಲಸ ಮಾಡುತ್ತಿದ್ದು, ಕೆಲಸ ನಿಮಿತ್ತ ಜಿಲ್ಲೆಯ ವಿವಿಧ ತಾಲ್ಲೂಕುಗಳಿಗೆ ಭೇಟಿ ನೀಡಲು ಪ್ರತಿ ತಿಂಗಳು 4 ಸಾವಿರ ರೂ.ಗಳು ಖರ್ಚಾಗುತ್ತಿದ್ದವು.

ಶಕ್ತಿ ಯೋಜನೆ ಜಾರಿಯಿಂದ ನಾನು ಉಚಿತವಾಗಿ ಬಸ್ ಪ್ರಯಾಣವನ್ನು ಮಾಡುತ್ತಿದ್ದು, ಈ ಮೊತ್ತ ನನಗೆ ಉಳಿಯುತ್ತಿದೆ. ಇದಕ್ಕಾಗಿ ನಾನು ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಹೇಳಿದರು. ಯುವನಿಧಿ ಯೋಜನೆಯಡಿ ಗರೀಬ್ ನವಾಜ್ ಅವರು ಮಾತನಾಡಿ, ಪದವಿ ಮುಗಿಸಿದ ನಂತರ ಏನು ಮಾಡಬೇಕೆಂಬ ಪ್ರಶ್ನೆಗೆ ಪರಿಹಾರವೇ ಯುವನಿಧಿ ಯೋಜನೆಯಾಗಿದೆ. ಇದು ನಮ್ಮಂತ ನಿರುದ್ಯೋಗಿ ಯುವಕರಿಗೆ ಆರ್ಥಿಕ ಭದ್ರತೆಯನ್ನು ನೀಡುವಂತಹ ಕಾರ್ಯಕ್ರಮ. ನನಗೆ ಈವರೆಗೆ ಬಂದ ಯುವನಿಧಿಯ ಸಹಾಯಧನ ಮೊತ್ತವನ್ನು ಕೂಡಿಟ್ಟು ಅದನ್ನು ಸ್ಪರ್ಧಾತ್ಮಕ ಪರೀಕ್ಷೆಗಳ ತಯಾ–ರಿಗಾಗಿ ಉಪಯೋಗಿಸಿ ಕೊಳ್ಳುತ್ತಿದ್ದೇನೆ ಎಂದುರು.

ಪಂಚ ಗ್ಯಾರಂಟಿ ಯೋಜನೆಗಳಿಗೆ ಲಾಭ ಪಡೆದು ಅದನ್ನು ಇತರರಿಗೆ ಮಾದರಿಯಾದ ರಾಯಚೂರು ಜಿಲ್ಲೆಯ ಫಲಾನುಭವಿಗಳಿಗೆ ಇದೇ ಸಂದರ್ಭದಲ್ಲಿ ಅಭಿನಂದನಾ ಪ್ರಮಾಣ ಪತ್ರವನ್ನು ವಿತರಣೆ ಮಾಡಲಾಯಿತು. ಈ ಕಾರ್ಯಾಗಾರದ ಉದ್ಘಾಟನೆಯನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ನೆರವೇರಿಸಿದರು. ಈ ಸಂದರ್ಭದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರದ ಎನ್.ಎಸ್.ಬೋಸರಾಜು, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ. ರೇವಣ್ಣ, ರಾಯಚೂರು ಸಂಸದರಾದ ಜಿ.ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಹಂಪನಗೌಡ ಬಾದರ್ಲಿ, ಆರ್.ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ (ಮೈಸೂರು ವಿಭಾಗದ) ಉಪಾಧ್ಯಕ್ಷೆ ಡಾ. ಪುಷ್ಪ ಅಮರನಾಥ, ರಾಯಚೂರು ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಜಿಲ್ಲಾಧಿಕಾ–ರಿಗಳಾದ ಕೆ.ನಿತೀನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಗೌಡ, ಆರ್‌ಡಿಎ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ, ಜಾಗೃತ ಕರ್ನಾಟಕದ ಸಂಚಾಲಕರಾದ ಪ್ರೊ. ಬಿ.ಸಿ.ಬಸವರಾಜ ಸೇ–ರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷರು, ವಿವಿಧ ತಾಲೂಕುಗಳ ಅಧ್ಯಕ್ಷರು, ಸದಸ್ಯರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### LLM

ಐಐಒ **(Master of Laws)** ಎನ್ನುವುದು 1 ರಿಂದ 2 ವರ್ಷಗಳ ಸ್ನಾತಕೋತ್ತರ ಕಾನೂನು ಪದವಿಯಾಗಿದ್ದು, ಐಐಃ ಪೂರ್ಣಗೊಳಿಸಿದ ನಂತರ ಕ್ರಿಮಿನಲ್, ಕಾರ್ಪೊರೇಟ್, ಅಥವಾ ಅಂತರರಾಷ್ಟ್ರೀಯ ಕಾನೂನಿನಲ್ಲಿ ಪರಿಣತಿ ಪಡೆಯಲು ಉತ್ತಮ ಅವಕಾಶವಾಗಿದೆ. ಇದು 4 ಸೆಮಿಸ್ಟರ್‌ಗಳನ್ನು ಹೊಂದಿದ್ದು (ಕೆಲವೆಡೆ 1 ವರ್ಷವೂ ಇರುತ್ತದೆ), ಪ್ರಬಂಧ (Dissertation) ಸಲ್ಲಿಸುವುದು ಕಡ್ಡಾಯವಾಗಿದೆ.ಎಲ್‌ಎಲ್‌ಎಂ ಪೂರ್ಣ ರೂಪ ಮಾಸ್ಟರ್ ಆಫ್ ಲಾಸ್ , ಇದು ಕಾನೂನು ಕ್ಷೇತ್ರದಲ್ಲಿ ಸ್ನಾತಕೋತ್ತರ ಪದವಿ ಕಾರ್ಯಕ್ರಮವಾಗಿದ್ದು, ಕಾನೂನು ಪದವೀಧರರಿಗೆ ಒಬ್ಬರ ವೃತ್ತಿಜೀವನದ ಉದ್ದೇಶಗಳಿಗೆ ಸ್ಪಷ್ಟ ನಿರ್ದೇಶನವನ್ನು ನೀಡುತ್ತದೆ. ಈ ಸ್ನಾತಕೋತ್ತರ ಕೋರ್ಸ್‌ನ ಅವಧಿ 2 ವರ್ಷಗಳು.1987 ರಲ್ಲಿ ಭಾರತದಲ್ಲಿ ವಿಶೇಷ ಸ್ವಾಯತ್ತ ಕಾನೂನು ಶಾಲೆಗಳು ಪ್ರಾರಂಭವಾದಾಗಿನಿಂದ, ರಾಷ್ಟ್ರೀಯ ಕಾನೂನು ಶಾಲೆ ಆಫ್ ಇಂಡಿಯಾ ವಿಶ್ವವಿದ್ಯಾಲಯದ ಸ್ಥಾಪನೆಯೊಂದಿಗೆ, ದೇಶದಲ್ಲಿ ಸ್ನಾತಕೋತ್ತರ ಮಟ್ಟದ ಕಾನೂನು ಶಿಕ್ಷಣಕ್ಕೆ ಗಮನಾರ್ಹ ಒತ್ತು ನೀಡಲಾಗಿದೆ .ಐಐಒ ಅರ್ಹತೆಯ ಮಾನದಂಡವೆಂದರೆ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ 3 ವರ್ಷಗಳ ಐಐಃ ಅಥವಾ 5 ವರ್ಷಗಳ ಇಂಟಿಗ್ರೇಟೆಡ್ ಐಐಃ ಪೂರ್ಣಗೊಳಿಸುವುದು . **LLM** ಪ್ರವೇಶವನ್ನು ಅರ್ಹತೆ ಅಥವಾ **CUET-PG, CLAT, TS PGLCET, AP PGLCET, AILET,** ಇತ್ಯಾದಿ ಪ್ರವೇಶ ಪರೀಕ್ಷೆಗಳ ಆಧಾರದ ಮೇಲೆ ಮಾಡಬಹುದು . ಜನಪ್ರಿಯ LLM ಕಾಲೇಜುಗಳೆಂದರೆ – NLSIU ಬೆಂಗಳೂರು, ಸಿಂಬಯೋಸಿಸ್ ಕಾನೂನು ಶಾಲೆ, NLU ದೆಹಲಿ, ನಲ್ಸರ್ ಕಾನೂನು ವಿಶ್ವವಿದ್ಯಾಲಯ, ಖಔಂ ವಿಶ್ವವಿದ್ಯಾಲಯ, ಃಂಗ ಲಕ್ನೋ, ಇತ್ಯಾದಿ. ಪ್ರವೇಶಕ್ಕಾಗಿ LLB ಪೂರ್ಣಗೊಳಿಸಿರಬೇಕು ಮತ್ತು ಪ್ರವೇಶ ಪರೀಕ್ಷೆಗಳನ್ನು (CLAT PG, AILET) ಬರೆಯಬೇಕಾಗಬಹುದು. ಐಐಒ ಕೋರ್ಸ್ ವಿವರಗಳು (ಕನ್ನಡದಲ್ಲಿ):ಕೋರ್ಸ್ ಹೆಸರು: ಐಐಒ (Master of Laws – ಲೆಗಮ್ ಮ್ಯಾಜಿಸ್ಟರ್). ಅವಧಿ: ಸಾಮಾನ್ಯವಾಗಿ 2 ವರ್ಷಗಳು (4 ಸೆಮಿಸ್ಟರ್‌ಗಳು). ಕೆಲವು ಸಂಸ್ಥೆಗಳಲ್ಲಿ 1 ವರ್ಷದ ಕೋರ್ಸ್ ಕೂಡ ಇದೆ. ಅರ್ಹತೆ: ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಐಐಃ (3 ಅಥವಾ 5 ವರ್ಷಗಳ ಕೋರ್ಸ್) ಪೂರ್ಣಗೊಳಿಸಿರಬೇಕು.ವಿಶೇಷತೆಗಳು **(Specializations)**: ಕ್ರಿಮಿನಲ್ ಕಾನೂನು, ಕಾರ್ಪೊರೇಟ್ ಕಾನೂನು, ಸೈಬರ್ ಕಾನೂನು, ಅಂತರರಾಷ್ಟ್ರೀಯ ಕಾನೂನು, ಬೌದ್ಧಿಕ ಆಸ್ತಿ ಹಕ್ಕುಗಳು **(IPR)**, ಪರಿಸರ ಕಾನೂನು.ಪ್ರವೇಶ ಪ್ರಕ್ರಿಯೆ:ರಾಷ್ಟ್ರೀಯ ಮಟ್ಟದ ಪರೀಕ್ಷೆಗಳು: CLAT PG, AILET. KSLU Law School (Hubballi), Karnataka State Law University (KSLU).

ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ 9902277588

# ಉಚಿತ ಆರೋಗ್ಯ ತಪಾಸಣಾ ಶಿಬಿರ

ನೈಜ್ಯ ದೆಸೆ ನ್ಯೂಸ್

**ಉಚಿತ ಆರೋಗ್ಯ ತಪಾಸಣಾ ಶಿಬಿರದಿಂದ ಬಡವರು ಆರೋಗ್ಯ ಸಂಬಂಧಿಸಿದ ಸಮಸ್ಯೆ ಬಗೆಹರಿಸಿಕೊಳ್ಳಲು ಉತ್ತಮ ಅವಕಾಶವಾಗಿದೆ' ಎಂದು ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯಸಿಂಗ್ ಹೇಳಿದರು.ತಾಲ್ಲೂಕಿನ ಮಂದೇವಾಲ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಧರ್ಮಸಿಂಗ್ ಫೌಂಡೇಶನ್ ವತಿಯಿಂದ ಆಯೋಜಿಸಲಾಗಿದ್ದ ಸ್ತನ, ಗರ್ಭಕೋಶ ಕ್ಯಾನ್ಸರ್ ಹಾಗೂ ಕಣ್ಣಿನ ತಪಾಸಣೆ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.**

ಆರೋಗ್ಯ ಸೇವೆ ಒಂದು ಅತ್ಯುತ್ತಮವಾದ ಸೇವೆಯಾಗಿದೆ. ಉಳ್ಳವರು ದೊಡ್ಡ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಾರೆ. ಆದರೆ ಬಡವರಿಗೆ ಇಂತಹ ಉಚಿತ ಆರೋಗ್ಯ ಶಿಬಿರಗಳು ತುಂಬಾ ಪರಿಣಾಮಕಾರಿಯಾಗಿ ಉಪಯೋಗ ಆಗುತ್ತದೆ. ಇತ್ತೀಚೆಗೆ ಸಾಕಷ್ಟು ಮಹಿಳೆಯರು ಸ್ತನ ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ಇದನ್ನು ತಡೆಗಟ್ಟಲು ಜೀವನಶೈಲಿಯಲ್ಲಿ ಮಾರ್ಪಾಡು ಮಾಡಿಕೊಳ್ಳಬೇಕು.




ತಿಂಗಳಿಗೊಮ್ಮೆ ಸ್ವಯಂ ಪರೀಕ್ಷಿಸುವ ಮೂಲಕ ಮುನ್ನೆಚ್ಚರಿಕೆ ವಹಿಸಬಹುದು. ಬೇಗ ಬದಲಾವಣೆ ಗಮನಿಸಿ, ವೈದ್ಯಕೀಯ ಸಲಹೆ ಪಡೆಯುವುದು ಉತ್ತಮ. ಕ್ಯಾನ್ಸರ್ ಆರಂಭಿಕ ಹಂತದಲ್ಲಿ ಕಂಡುಬಂದರೆ, ಚಿಕಿತ್ಸೆಯು ಯಶಸ್ವಿಯಾಗುವ ಸಾಧ್ಯತೆಯಿದೆ.

ವೈದ್ಯರಿಂದ ನಿಯಮಿತ ಪರೀಕ್ಷೆ ಮಾಡಿಸಿಕೊಳ್ಳುವುದು ಮತ್ತು ಮ್ಯಾಮೊಗ್ರಾಮ್ ಮಾಡುವುದರಿಂದ ಕ್ಯಾನ್ಸರ್ ಕಂಡುಹಿಡಿಯಲು ಸಾಧ್ಯ. ಧರ್ಮಸಿಂಗ್ ಫೌಂಡೇಶನ್ ವತಿಯಿಂದ ಆಯೋಜಿಸಿರುವ ಈ ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯ ಮಹಿಳೆಯರು ಭಾಗವಹಿಸಿ, ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು. ಕ್ಯಾನ್ಸರ್ ಮುಕ್ತ ಸಮಾಜಕ್ಕೆ ಫೌಂಡೇಶನ್ ಭದ್ರಬುನಾದಿ ಹಾಕಲಿದೆ' ಎಂದು ಹೇಳಿದರು. ಧರ್ಮಸಿಂಗ್ ಫೌಂಡೇಶನ್, ಕ್ಯಾನ್ಸರ್ ಕೇರ್ ಇಂಡಿಯಾ, ಮತ್ತು ಅನುಗ್ರಹ ಕಣ್ಣಿನ ಆಸ್ಪತ್ರೆಗಳ ಸಹಯೋಗದೊಂದಿಗೆ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಶಿಬಿರದಲ್ಲಿ ವೈದ್ಯೆ ಡಾ.ಕಾಮೇಶ್ವರಿ ದೇವಿ ನೇತೃತ್ವದ ತಂಡವು ನೂರಾರು ಮಹಿಳೆಯರನ್ನು ಪರೀಕ್ಷಿಸಿ, ಕಾಯಿಲೆಯ ಲಕ್ಷಣ ಮತ್ತು ಮುಂಜಾಗ್ರತೆ ಹಾಗೂ ಜೀವನಶೈಲಿಯ ಬಗ್ಗೆ ಮಾರ್ಗದರ್ಶನ ನೀಡಿತು. ಶಾಸಕ ಡಾ.ಅಜಯ್ ಸಿಂಗ್ ಅವರು ವೈದ್ಯರಾಗಿ ಶಿಬಿರದಲ್ಲಿ ರೋಗಿಗಳ ತಪಾಸಣೆ ನಡೆಸಿದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಉಮೇಶ ಶರ್ಮಾ, ಪ್ರಮುಖರಾದ ರಾಜಶೇಖರ ಸೀರಿ, ಬಸವಂತರಾಯ ಸಾಹು ಗಾಣಿಗೇರ, ಶಿವಪುತ್ರಪ್ಪ ಸಾಹು ಕೋರಿ, ಶರಣಬಸಪ್ಪ ಜೋಗೂರ, ಪ್ರತಾಪ ಕಟ್ಟಿ, ರವಿ ಉಮ್ನರ್ಗಿ, ಬಹಾದ್ದೂರ ರಾಠೋಡ, ವಿಜಯಕುಮಾರ ಹಿರೇಮಠ, ಮಹಿಬೂಬ ಶಿರಸಗಿ, ಶ್ರೀಶೈಲ ಬುಟ್ನಾಳ, ಗುರುನಾಥ ಪಾಟೀಲ ಕುರನಳ್ಳಿ, ಗಫೂರ ಬಾಗವಾನ್ ಸೇರಿ ಹಲವಾರು ಜನರು ಭಾಗವಹಿಸಿದ್ದರು.

# ಫೆ.09: ಬಳ್ಳಾರಿ ಬಿಸಿಲಹಳ್ಳಿ ವಿದ್ಯುತ್ ವ್ಯತ್ಯಯ




ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಯ 110/11ಕೆ.ವಿ ಬಿಸಿಲಹಳ್ಳಿ ವಿದ್ಯುತ್ ಉಪ–ಕೇಂದ್ರದಿ0ದ ವಿದ್ಯುತ್ ಸರಬರಾಜಾಗುವ ಎಫ್–63 ಹಾಗು ಎಫ್–64 ಫೀಡರ್ ಗಳಲ್ಲಿ ಲಿಂಕ್–ಲೈನ್ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಫೆ.09 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–63 ವ್ಯಾಪ್ತಿಯ ರೂಪನಗುಡಿ, ಗ್ರಾಂಡ್ ಫಂಕ್ಷನ್ ಹಾಲ್, ವೆಂಕಟರಮಣ ನಗರ, ನಬೀ ಕಾಲೋನಿ, ಅಂಜಿನಪ್ಪ ನಗರ, ಶ್ರೀರಾಂಪುರ ಕಾಲೋನಿ, ಗೋನಾಳ್, ವರಬಸಪ್ಪ ಗುಡಿ ಹಾಗೂ ಮುಂತಾದ ಏರಿಯಾಗಳು. ಎಫ್–64 ವ್ಯಾಪ್ತಿಯ ಎಸ್.ಆರ್.ಎಂ ಲೇ ಔಟ್, ಸಂಸ್ಕೃತಿ ಶಾಲೆ, ವಿಶಾಲ ನಗರ, ಹನುಮಾನ್ ನಗರ, ಬಿ.ಗೋನಾಳ್, ಹೌಸಿಂಗ್ ಬೋರ್ಡ್, ವೆಂಕಟಲಕ್ಷ್ಮಿ?ಮ ನಗರ, ಅಂಜಿನಪ್ಪ ನಗರ, ಎಸ್.ಆರ್.ಪಿ ಕಾಲೋನಿ, ಎಮ್.ಜಿ ರಸ್ತೆ, ಅನಂತಪುರ ರಸ್ತೆ, ಅಗಡಿ ಮಾರೆಪ್ಪ ಕಾಂಪೌ0ಡ್, ದತ್ತ ಸಾಯಿ ನಗರ, ಆಶ್ರಯ ಕಾಲೋನಿ. ಎಫ್–52 ವ್ಯಾಪ್ತಿಯ ತಿರುಮಲ ನಗರ ಕ್ಯಾಂಪ್, ಶಂಕರಬ0ಡೆ, ಇಬ್ರಾಹಿಂಪುರ, ಬಬ್ಬುಕುಂಟೆ, ಬುರನಾಯಕಹಳ್ಳಿ ಐ.ಪಿ ಫೀಡರ್ ಏರಿಯಾಗಳು. ಎಫ್–53 ವ್ಯಾಪ್ತಿಯ ತಿರುಮಲ ನಗರ ಕ್ಯಾಂಪ್, ಶಂಕರ ಬಂಡೆ, ಇಬ್ರಾಹಿಂಪುರ, ಬಬ್ಬುಕುಂಟೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.





# ರೈಲ್ವೆ ಇಲಾಖೆಯಡಿ ಕರ್ನಾಟಕಕ್ಕೆ 7,748 ಕೋಟಿ ರೂ. ಸಿಗಲಿದೆ :ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರೈಲ್ವೆ ಇಲಾಖೆಯಡಿ ಕರ್ನಾಟಕಕ್ಕೆ ಒಟ್ಟು 7,748 ಕೋಟಿ ರೂ.ಮೊತ್ತ ಸಿಗಲಿದ್ದು, ಇದು ಕಾಂಗ್ರೆಸ್ ನೇತೃತ್ವದ ಕೇಂದ್ರ ಸರಕಾರ ನೀಡಿದ್ದ ಮೊತ್ತಕ್ಕಿಂತ 9 ಪಟ್ಟು ಹೆಚ್ಚು ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.**

ಶನಿವಾರ ಮಲ್ಲೇಶ್ವರದಲ್ಲಿನ ಬಿಜೆಪಿ ಕೇಂದ್ರ ಕಚೇರಿ ಜಗನ್ನಾಥ ಭವನದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಆಡಳಿತದಡಿ 800 ಕೋಟಿ ರೂ. ಕರ್ನಾಟಕ ರಾಜ್ಯಕ್ಕೆ ಸಿಗುತ್ತಿತ್ತು. ಇದೀಗ 7,748 ಕೋಟಿ ರೂ.ಗಳಿಗೆ ಏರಿಕೆಯಾಗಿದೆ. ಸೆಮಿ ಕಂಡಕ್ಟರ್ ಕೈಗಾರಿಕೆಯಲ್ಲಿ ಬೆಂಗಳೂರು ಮತ್ತು ಮೈಸೂರು ಮಹತ್ವದ ಪಾತ್ರ



ವಹಿಸುತ್ತಿವೆ ಎಂದು ತಿಳಿಸಿದರು.ಈ ವರ್ಷದ ಕೇಂದ್ರ ಬಜೆಟ್ 2047ಕ್ಕೆ ವಿಕಸಿತ ಭಾರತದ ರೋಡ್ ಮ್ಯಾಪ್. 2047ಕ್ಕೆ ನಾವು ವಿಕಸಿತ ಭಾರತ ಮತ್ತು ಅಭಿವೃದ್ಧಿ ಹೊಂದಿದ ದೇಶವಾಗಬೇಕೆಂದು ಸಂಕಲ್ಪ ಮಾಡಿದ್ದೇವೆ. ಅದಕ್ಕೆ ಈ ರೋಡ್ ಮ್ಯಾಪ್ ಪೂರಕ. ಉತ್ಪಾದನಾ ಕ್ಷೇತ್ರದ ನಾವೀನ್ಯತೆ ಹಾಗೂ ದೇಶವನ್ನು ಆಧುನಿಕ ವಿಶ್ವಕ್ಕೆ ಸಿದ್ಧಪಡಿಸುವುದು, ಸಮಾಜದ ಪ್ರತಿವರ್ಗವೂ ಬೆಳವಣಿಗೆಯ ಪ್ರಯೋಜನ ಪಡೆಯುವಂತೆ ಮಾಡುವ ಅಂತರ್ಗತ ಬೆಳವಣಿಗೆ, ನಾವು ಮಾಡಬೇಕಾದ ಕರ್ತವ್ಯಗಳೇ ಈ 3 ಕಂಬಗಳು ಎಂದು ವಿವರಿಸಿದರು. ಮೇಕ್ ಇನ್ ಇಂಡಿಯವು ಈಗಾಗಲೇ ಉತ್ತಮ ಸಾಧನೆ ಮಾಡಿದೆ. ಈ ಬಜೆಟ್‌ನಲ್ಲಿ ಸೆಮಿ ಕಂಡಕ್ಟರ್ ಉತ್ಪಾದನೆಗೆ ಒತ್ತು ಕೊಡಲಾಗುತ್ತಿದೆ. ಬಯೋಫಾರ್ಮಕ್ಕೆ ಆದ್ಯತೆ ನೀಡಲಿದ್ದೇವೆ. ವಾಯುಯಾನ, ಬಾಹ್ಯಾಕಾಶ, ಕೈಗಾರಿಕೆಯಡಿ ಹೈಟೆಕ್ ಟೂಲ್ ರೂಮ್‌ಗಳು ಪ್ರಿಸಿಶನ್ ಉತ್ಪಾದನೆಯಲ್ಲಿ ತೊಡಗಿಸಿಕೊಳ್ಳಲಾಗಿದೆ ಎಂದು ಅವರು ನುಡಿದರು.

# ಬಡವರ ಆರ್ಥಿಕ ಸಬಲೀಕರಣಕ್ಕೆ ಪಂಚ ಗ್ಯಾರಂಟಿ ಯೋಜನೆಗಳ ಜಾರಿ :ಸಚಿವ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್


ನೈಜ್ಯ ದೆಸೆ ನ್ಯೂಸ್

**ರಾಯಚೂರು: ಫೆಬ್ರುವರಿ 07 (ಕರ್ನಾಟಕ ವಾರ್ತೆ): ರಾಜ್ಯದ ಪ್ರಗತಿ ಜೊತೆಗೆ ಬಡವರ ಆರ್ಥಿಕತೆಯನ್ನು ಸುಧಾರಿಸಲು ನಮ್ಮ ಸರ್ಕಾರವು ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ನುಡಿದಂತೆ ನಡೆದಿದ್ದೇವೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಹೇಳಿದರು.**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ನಿಮಿತ್ತ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆ ಇವರುಗಳ ಸಂಯುಕ್ತಾಶ್ರಯದಲ್ಲಿ ಶನಿವಾರದಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಕಾರ್ಯಗಾರದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮೀ, ಯುವನಿಧಿ ಮತ್ತು ಅನ್ನಭಾಗ್ಯ ಸೇರಿ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಸುಮಾರು ಒಂದು ಲಕ್ಷ ಕೋಟಿ ರೂ.ಗಳನ್ನು ಮಧ್ಯವರ್ತಿಗಳ ಹಾವಳಿಯಿಲ್ಲದೆರಾಜ್ಯದ ಜನರ ಮನೆ ಬಾಗಿಲಿಗೆ ನೇರವಾಗಿ ತಲುಪಿಸುವ ಕೆಲಸವಾಗುತ್ತಿದೆ.

ನಮ್ಮ ಸರ್ಕಾರಕ್ಕೆ ಹೆಣ್ಣು ಮಕ್ಕಳ ಮೇಲೆ ಬಹಳಷ್ಟು ವಿಶ್ವಾಸವಿದೆ. ಮಹಿಳೆಯರ ಕೈಯಲ್ಲಿ ಹಣ ನೀಡಿದರೆ, ಅವರ ಕುಟುಂಬ ಸುಧಾ–ರಿಸುತ್ತದೆ ಎಂಬ ನಂಬಿಕೆಯಿಂದ ಪಂಚ ಗ್ಯಾರಂಟಿ ಯೋಜನೆಗಳನ್ನು ವಿಶೇಷವಾಗಿ ಮಹಿಳೆಯರನ್ನು



ಕೇಂದ್ರೀಕರಿಸಿ, ಅನುಷ್ಠಾನ ಮಾಡಲಾಗಿದೆ ಎಂದರು. ಬಡವರು, ಹಿಂದುಳಿದವರು, ಮಧ್ಯಮ ವರ್ಗದವರು ಸೇರಿದಂತೆ ಪ್ರತಿಯೊಬ್ಬರೂ ನೆಮ್ಮದಿಯಿಂದ ಬದುಕಬೇಕು. ಪ್ರತಿಯೊಬ್ಬರ ಆದಾಯ ಹೆಚ್ಚಾಗಬೇಕು ಎಂಬುದು ನಮ್ಮ ಸರ್ಕಾರದ ಉದ್ದೇಶವಾಗಿದೆ. ಆದಾಯ ಹೆಚ್ಚಾದಂತೆ ಕುಟುಂಬದ ಅಭಿವೃದ್ಧಿ ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಪೂರಕವಾಗಿವೆ. ಉತ್ತಮ ಜನಾಭಿಪ್ರಾಯ ಇದ್ದಾಗ ಮಾತ್ರ ಸರ್ಕಾರಗಳು ಯಾವುದೇ ಯೋಜನೆಯನ್ನು ರೂಪಿಸಲು ಸಾಧ್ಯವಾಗುತ್ತದೆ. ಹಾಗಾಗಿ ಈ ಎಲ್ಲಾ ಯೋಜನೆಗಳ ಲಾಭ ಪಡೆದುಕೊಂಡ ಫಲಾನುಭವಿಗಳು ವಿಶೇಷವಾಗಿ ಮಹಿಳೆಯರು ಯೋಜನೆಯ ಅನುಕೂಲಗಳ ಬಗ್ಗೆ ಸ್ಪಷ್ಟವಾಗಿ ಮಾತನಾಡಬೇಕು.

ಇದರಿಂದ ಯಾರೂ ಈ ಯೋಜನೆಗಳ ಬಗ್ಗೆ ಅಪಪ್ರಚಾರ ಮಾಡುಲು ಸಾಧ್ಯವಾಗುವುದಿಲ್ಲ ಎಂದು ಹೇಳಿದರು. ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ. ರೇವಣ್ಣ ಅವರು ಮಾತನಾಡಿ, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ನೇತೃತ್ವದ ನಮ್ಮ ರಾಜ್ಯ ಸರ್ಕಾರವು ಪಂಚ ಗ್ಯಾರಂಟಿ ಯೋಜನೆಗಳನ್ನು ಅತ್ಯಂತ ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿರುವ ಮೂಲಕ 25 ತಿಂಗಳುಗಳನ್ನು ಯಶಸ್ವಿಯಾಗಿ ಪೂರೈಸಿದೆ. ಯಾವುದೇ ಮಧ್ಯವರ್ತಿಗಳಿಲ್ಲದೇ ನೇರವಾಗಿ ಫಲಾನುಭವಿಗಳಿಗೆ ತಲುಪುವ ಯೋಜನೆಗಳಾಗಿವೆ. ಇವು ಇಡೀ ಭಾರತದಲ್ಲೇ ಮೊದಲ ಬಾರಿಗೆ ಜಾ–ರಿಯಾದ ಪಾರದರ್ಶಕ ವ್ಯವಸ್ಥೆಯಾಗಿದೆ. ಪಂಚ ಗ್ಯಾರಂಟಿ ಯೋಜನೆಗಳಿಗಾಗಿ 1 ಲಕ್ಷದ 12 ಸಾವಿರ ಕೋಟಿ ರೂ.ಗಳನ್ನು ಒದಗಿಸುತ್ತಿದೆ ಎಂದರು. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಕಲ್ಪಿಸುವ ಶಕ್ತಿ ಯೋಜನೆಯು 665 ಕೋಟಿ ಟ್ರಿಪ್ ಗಳಲ್ಲಿ ಮಹಿಳೆಯರ ಉಚಿತ ಬಸ್ ಪ್ರಯಾಣವು ವಿಶ್ವ ದಾಖಲೆಯನ್ನು ನಿರ್ಮಿಸಿದೆ.

ಈ ಯೋಜನೆಯಿಂದ ಮಹಿಳೆಯರ ಜೀವನದಲ್ಲಿ ಸಂತೋಷ ಮತ್ತು ಸ್ವಾತಂತ್ರ್ಯ ಹೆಚ್ಚಾಗಿದೆ. ಮನೆಮಧ್ಯೆ ಸೀಮಿತವಾಗಿದ್ದ ಮಹಿಳೆಯರು ಇದೀಗ ದೇವಸ್ಥಾನಗಳು, ಬಂಧು, ಬಳಗದ ಮನೆಗಳಿಗೆ, ಪ್ರವಾಸಿ ತಾಣಗಳಿಗೆ ಮುಕ್ತವಾಗಿ ಸಂಚರಿಸುತ್ತಿರುವುದು ಕಾಣಸಿಗುತ್ತಿದೆ. ನಮ್ಮ ದೇಶದ ಬೇರೆ ಬೇರೆ ರಾಜ್ಯಗಳಲ್ಲಿ



ಗ್ಯಾರಂಟಿ ಯೋಜನೆಗಳ ಮಾದರಿಯಲ್ಲಿ ಜಾ–ರಿಗೆ ತಂದ ಯೋಜನೆಗಳನ್ನು ಕೆಲವೇ ಕೆಲವು ತಿಂಗಳಲ್ಲಿ ನಿಲ್ಲಿಸಿದ್ದಾರೆ. ಆ ಎಲ್ಲಾ ರಾಜ್ಯಗಳಿಗೆ ನಮ್ಮ ರಾಜ್ಯ ಒಂದು ಮಾದರಿಯಾಗಿದೆ ಎಂದು ಹೇಳಿದರು. ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ (ಮೈಸೂರು ವಿಭಾಗದ) ಉಪಾಧ್ಯಕ್ಷೆ ಡಾ. ಪುಷ್ಪ ಅಮರನಾಥ ಅವರು ಮಾತನಾಡಿ, ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯ ಸರ್ಕಾರವು ಭದ್ರತೆಯ ಭರವಸೆ ನೀಡಿದೆ.

ಮಹಿಳೆಯರ ಬದುಕಿಗೆ ಆರ್ಥಿಕ ಮತ್ತು ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಮಹಿಳೆಯರಲ್ಲಿ ಆತ್ಮವಿಶ್ವಾಸ ಹೆಚ್ಚಿಸಿವೆ ಇದು ಅಭಿನಂದನಾರ್ಹವಾಗಿದೆ. ಗ್ಯಾರಂಟಿ ಯೋಜನೆಗಳು ಅರ್ಹ ಪ್ರತಿಯೊಬ್ಬರಿಗೂ ತಲುಪುವಂತೆ ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು. ಶಯೋಜನೆಯಡಿ ಉಚಿತ ಬಸ್ ಪ್ರಯಾಣ ಸೌಲಭ್ಯ ಕಲ್ಪಿಸಿರುವುದರಿಂದ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ರಾಯಚೂರು ಉತ್ಸವದಲ್ಲಿ ಭಾಗವಹಿಸಲು ಸಾಧ್ಯವಾಗಿದೆ ಎಂದರು. ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ 4,37,355 ಫಲಾನುಭವಿಗಳಿಗೆ ಸಹಾಯಧನ ಒದಗಿಸಲಾಗಿದ್ದು, ಇದಕ್ಕಾಗಿ 2045.376 ಕೋಟಿ ರೂ.ಗಳ ವೆಚ್ಚ ಭರಿಸಲಾಗಿದೆ. ಶಕ್ತಿ ಯೋಜನೆಯಡಿ 11.28 ಕೋಟಿ ಫಲಾನುಭವಿಗಳು ಉಚಿತ ಬಸ್ ಪ್ರಯಾಣದ ಸೌಲಭ್ಯ ಪಡೆದುಕೊಂಡಿದ್ದಾರೆ.

4,53,891 ಪಡಿತರ ಚೀಟಿಗಳಿಗೆ ಅನ್ನಭಾಗ್ಯ ಯೋಜನೆಯಿಂದ ಅನುಕೂಲವಾಗಿದೆ. ಗೃಹಜ್ಯೋತಿ ಯೋಜನೆಯಡಿ ಶೇ. 95ರಷ್ಟು ಪ್ರಗತಿ ಸಾಧಿಸಲಾಗಿದೆ. ಯುವನಿಧಿ ಯೋಜನೆಯಲ್ಲಿ ರಾಯಚೂರು ಜಿಲ್ಲೆ 4ನೇ ಸ್ಥಾನದಲ್ಲಿದೆ. ಇಲ್ಲಿಯವರೆಗೆ ಜಿಲ್ಲೆಯಲ್ಲಿ 12,056 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂದೂ ಅವರು ಕಾರ್ಯಕ್ರಮದ ರೂಪರೇಷಗಳ ಕುರಿತು ತಿಳಿಸಿದರು. ಜಾಗೃತ ಕರ್ನಾಟಕದ ಸಂಚಾಲಕರಾದ ಪ್ರೊ. ಬಿ.ಸಿ.ಬಸವರಾಜ ಅವರು ಪಂಚ ಗ್ಯಾರಂಟಿ ಯೋಜನೆಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರದ ಎನ್.ಎಸ್.ಬೋಸರಾಜು, ರಾಯಚೂರು ಸಂಸದರಾದ ಜಿ.ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಹಂಪನಗೌಡ ಬಾದರ್ಲಿ, ಆರ್.ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಗೌಡ, ಆರ್‌ಡಿಎ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ, ಜಿಲ್ಲಾಧಿಕಾರಿಗಳಾದ ಕೆ.ನಿತೀನ್, ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷರು, ವಿವಿಧ ತಾಲೂಕುಗಳ ಅಧ್ಯಕ್ಷರು, ಸದಸ್ಯರು ಹಾಗೂ ವಿವಿಧ ಇಲಾಖೆಗಳ.